ಸಂಪುಟ : 10 ಸಂಚಿಕೆ: 266 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 05 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ


Volume : 10 Issue : 266 Pages : 4+2 Price : 3.00 Friday December 05 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




### ಪೊಲೀಸರ ರೋಚಕ ಕಾರ್ಯಾಚರಣೆ । ಜ್ಯುವೆಲರಿ ಶಾಪ್ ಕಳ್ಳನ ಬಂಧನ । ಕ್ಲಿಷ್ಟಕರ ಪ್ರಕರಣ ಭೇದಿಸಿದ ಪೊಲೀಸ್ ತಂಡ

# ಬಸ್ ಏರಿ ಪರಾರಿಯಾಗಿದ್ದ ಕಳ್ಳ 6 ಗಂಟೆಯೊಳಗೆ ಅಂದರ್!





■ ವಿಜಯಸಾಕ್ಷಿ ಸುದ್ದಿ, ಗದಗ

ಜ್ಯುವೆಲರಿ ಶಾಪ್ ಕಳ್ಳತನ ಪ್ರಕರಣ ಅವಳಿ ನಗರದಲ್ಲಿ ಸಂಚಲನ ಉಂಟು ಮಾಡಿತ್ತು. ಕಳ್ಳತನ ಪ್ರಕರಣ ಭೇದಿಸುವ ಸವಾಲು ಸ್ವೀಕರಿಸಿದ್ದ ಗದಗ ಪೊಲೀಸರು ಕೇವಲ 6 ಗಂಟೆಯ ಒಳಗೆ ಕಳ್ಳನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ 80,21,028 ರೂ ಮೌಲ್ಯದ ಬೆಳ್ಳಿ, ಬಂಗಾರದ ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ.

> ಒಂದು ಗ್ಯಾಸ್ ಕಟರ್, ಒಂದು ಹೈಡ್ರಾಲಿಕ್ ಕಟಿಂಗ್ ಮಶಿನ್, ಎರಡು ದೊಡ್ಡ ಸ್ಕ್ರೂ ಡ್ರೈವರ್‌ಗಳು, ಒಂದು ನೈಲಾನ್ ಹಗ್ಗ, ಒಂದು ಕಬ್ಬಿಣದ ಸುತ್ತಿಗೆ, ಒಂದು ಕಬ್ಬಿಣದ ಗ್ರಿಪ್ಪರ್‌ಗಳನ್ನು ಕಳ್ಳತನಕ್ಕೆ ಬಳಸಿದ್ದು, ಈ ಎಲ್ಲ ವಸ್ತುಗಳನ್ನೂ ವಶಕ್ಕೆ ಪಡೆಯಲಾಗಿದೆ.

ಇದರಿಂದ ಶ್ರೀ ಶಾಂತಾದುರ್ಗಾ ಜ್ಯುವೆಲರಿ ಮಾಲಕ ನಿಟ್ಟುಸಿರು ಬಿಟ್ಟಿದ್ದು, ಪೊಲೀಸ್ ಇಲಾಖೆಗೆ ಅಭಿನಂದನೆ ಸಲ್ಲಿಸಿದ್ದಾರೆ.

ಈ ಕುರಿತು ಪೊಲೀಸ್ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಎಸ್‌ಪಿ ರೋಹನ್ ಜಗದೀಶ್ ಅವರು, ಪ್ರಕರಣದ ಆರೋಪಿ ಯಾವುದೇ ಸಣ್ಣ ಸುಳಿವೂ ಸಿಗದಂತೆ ಕಳ್ಳತನ ಮಾಡಿ ಪರಾರಿಯಾಗಿದ್ದ. ಪ್ರಕರಣವನ್ನು ಸವಾಲಾಗಿ ಸ್ವೀಕರಿಸಿದ್ದ ಪೊಲೀಸ್ ತಂಡ ಗುಜರಾತ್ ಮೂಲದ ಮಹ್ಮದ್ ಹುಸೇನ ಸಿದ್ದಿಕಿ (43) ಎನ್ನುವ ವ್ಯಕ್ತಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ. ಆರೋಪಿಯನ್ನು ಬಂಧಿಸಲು 10 ತಂಡಗಳನ್ನು ರಚಿಸಿ ಕೇವಲ 6 ತಾಸಿನ ಒಳಗೆ ಯಶಸ್ವಿಯಾಗಿದ್ದೇವೆ ಎಂದು ಹೆಮ್ಮೆಯಿಂದ ಹೇಳಿದರು.

ಪ್ರಕರಣ ಭೇದಿಸಲು ದೃಢ ನಿರ್ಧಾರ ಮಾಡಿದ್ದೆವು. ಈ ಕಾರ್ಯಾಚರಣೆಯಲ್ಲಿ ಎಲ್ಲ ಪೊಲೀಸ್ ಸಿಬ್ಬಂದಿಗಳು ತಮ್ಮ ಜವಾಬ್ದಾರಿಯನ್ನು ಕಚ್ಚುಕಟ್ಟಾಗಿ ನಿಭಾಯಿಸಿದ್ದಾರೆ. ಇದೊಂದು ಕ್ಲಿಷ್ಟಕರ ಪ್ರಕರಣವಾಗಿತ್ತು. ಪ್ರಕರಣದ ಆರೋಪಿ ಗದಗದಿಂದ 7 ಗಂಟೆ ದೂರ ಕ್ರಮಿಸಿದ್ದಾನೆ ಎಂಬ ಮಾಹಿತಿ ಲಭ್ಯವಾಗಿತ್ತು. ಕೆಲ ಪ್ರಾಥಮಿಕ ಮಾಹಿತಿ ಮೇರೆಗೆ ಆರೋಪಿಯ ಸುಳಿವು ಸಿಕ್ಕಿತ್ತು. ಮಹಾರಾಷ್ಟ್ರದ ಕೊಲ್ಹಾಪೂರ ಜಿಲ್ಲೆಯ ವಡಗಾವ್ ಪೊಲೀಸರ ಸಹಾಯ ಪಡೆದು ಆರೋಪಿ ಬಂಧಿಸಲಾಗಿದೆ. ಮಹಾರಾಷ್ಟ್ರದ ಧೀರಜ್ ಮತ್ತು ಅವರ ತಂಡದ ಸಹಾಯದಿಂದ ಆರೋಪಿಯನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದೇವೆ ಎಂದು ಕಾರ್ಯಾಚರಣೆಯ ಮಾಹಿತಿ ನೀಡಿದರು.

### ಕದ್ದ ವಸ್ತುಗಳ ಮೌಲ್ಯ

ಸುಮಾರು 10,16,200 ರೂ ಕಿಮ್ಮತ್ತಿನ ಅಂದಾಜು 76.810 ಗ್ರಾಂ ತೂಕದ ಬಂಗಾರದ ಆಭರಣಗಳು, ಸುಮಾರು 61,09,828 ರೂ ಕಿಮ್ಮತ್ತಿನ ಅಂದಾಜು 33059.242 ಗ್ರಾಂ ತೂಕದ ಬೆಳ್ಳಿಯ ಸಾಮಾನುಗಳು, ಸುಮಾರು 8,95,000 ರೂ ಕಿಮ್ಮತ್ತಿನ ಜೆಮ್‌ಸ್ಟೋನ್‌ಗಳು, ಸುಮಾರು 26,000 ರೂ ನಗದು ಜ್ಯುವೆಲರಿ ಶಾಪ್‌ನಿಂದ ಕಳ್ಳತನವಾಗಿತ್ತು.

> ಕದ್ದ ಆಭರಣ ಕೊಂಡೊಯ್ಯಲು ಆರೋಪಿ ಸಾರಿಗೆ ಬಸ್ ಮೂಲಕ ಸಂಚರಿಸಿದ್ದಾನೆ. ಆರೋಪಿಯನ್ನು ಪತ್ತೆಹಚ್ಚುವಲ್ಲಿ ಕೆ.ಎಸ್.ಆರ್.ಟಿ.ಸಿ ಸಿಬ್ಬಂದಿಗಳ ಸಹಕಾರ ಬಹಳಷ್ಟಿದೆ. ಆರೋಪಿಯನ್ನು ಪತ್ತೆ ಹಚ್ಚುವಲ್ಲಿ ಶ್ರಮಿಸಿದ ಎಲ್ಲ ಪೊಲೀಸ್ ಸಿಬ್ಬಂದಿಗಳಿಗೆ ಪ್ರಶಂಸನಾ ಪತ್ರ ನೀಡಲಾಗುವುದು.
>
> – ರೋಹನ್ ಜಗದೀಶ್.
> ಜಿಲ್ಲಾ ಪೊಲೀಸ್ ಅಧೀಕ್ಷಕರು, ಗದಗ.

ಆರೋಪಿಯು ಕಳ್ಳತನ ಮಾಡುವ 5 ದಿನ ಮೊದಲು ಜ್ಯುವೆಲರಿ ಶಾಪ್ ಪಕ್ಕದ ಲಾಡ್ಜ್‌ನಲ್ಲಿ ವಾಸ್ತವ್ಯ ಮಾಡಿ, ಮೇಲ್ಭಾಗದ ಲೋಹದ ಗ್ರಿಲ್ ಕತ್ತರಿಸಿ ಅಂಗಡಿಗೆ ಪ್ರವೇಶಿಸಿ ಲೂಟಿ ನಡೆಸಿದ್ದಾನೆ. ಘಟನೆಯ ನಂತರ ಗದಗ ಹೊಸ ಬಸ್ ನಿಲ್ದಾಣದಿಂದ ಬಸ್ ಏರಿ ಪರಾರಿಯಾಗಿದ್ದ ಕಳ್ಳ, ನಂದಿನಿ ಪಾರ್ಲರ್‌ನಲ್ಲಿ ಹಾಲು ಕುಡಿದಿದ್ದು ಸೇರಿದಂತೆ ಬಸ್ ನಿಲ್ದಾಣದ ಸಿಸಿ ಟಿವಿಯಲ್ಲಿ ಸಂಪೂರ್ಣ ಚಲನವಲನ ಸೆರೆಯಾಗಿತ್ತು. ಸಿಸಿ ಟಿವಿಯಲ್ಲಿ ಸಿಕ್ಕ ಫೋಟೋವನ್ನು ಕಂಡಕ್ಟರ್‌ಗೆ ಕಳುಹಿಸಿದ ನಂತರ, ಕಳ್ಳ ಗದಗ–ಪೂನಾ ಬಸ್‌ನಲ್ಲೇ ಪ್ರಯಾಣಿಸುತ್ತಿದ್ದಾನೆ ಎಂಬುದು ದೃಢಪಟ್ಟಿತು. ತಕ್ಷಣ ಗದಗ ಮತ್ತು ಕೊಲ್ಹಾಪುರ ಎಸ್‌ಪಿಗಳ ಜಂಟಿ ಕಾರ್ಯಾಚರಣೆಯಲ್ಲಿ ಬಸ್‌ನ್ನು ತಡೆದು ಚಾಲಾಕಿ ಕಳ್ಳನನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ವಿವರಿಸಿದರು.

ಡಿಎಸ್‌ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆಯಲ್ಲಿ ಸಿಇಎನ್ ಡಿಎಸ್‌ಪಿ ಮಹಾಂತೇಶ ಸಜ್ಜನ, ಸಿಪಿಐ ಧೀರಜ್ ಶಿಂಧೆ, ಇನ್ಸ್‌ಪೆಕ್ಟರ್‌ಗಳಾದ ಎಲ್.ಕೆ. ಜೂಲಕಟ್ಟಿ, ಸಿದ್ರಾಮೇಶ್ವರ ಗಡೇದ, ಪಿಎಸ್‌ಐಗಳಾದ ಶಿವಕುಮಾರ, ಆರ್.ಆರ್. ಮುಂಡೆವಾಡಗಿ, ಜೆ.ಟಿ. ಜಕ್ಕಲಿ, ಮಾರುತಿ ಜೋಗದಂಡಕರ, ಸಿಬ್ಬಂದಿಗಳಾದ ವಿ.ಎಸ್. ಶೆಟ್ಟೆಣ್ಣವರ, ಯು. ▶▶ 3ನೇ ಪುಟಕ್ಕೆ

# ತಾಲೂಕು ಮಟ್ಟದ ಸದಸ್ಯರಿಗೆ ಗ್ರಾ.ಪಂ ಉಸ್ತುವಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ಯಾರಂಟಿ ಯೋಜನೆಗಳ ಸಂಪೂರ್ಣ, ಸಮರ್ಪಕ ನಿರ್ವಹಣೆಯೊಂದಿಗೆ ಪರಿಣಾಮ ಕಾರಿಯಾಗಿ ಗದಗ ತಾಲೂಕಿನಲ್ಲಿ ಜಾರಿಗೊಳಿಸುವ ದೃಷ್ಟಿಯಿಂದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕು ಸಮಿತಿಯ ಸದಸ್ಯರನ್ನು ತಾಲೂಕು ಮಟ್ಟದ ಜವಾಬ್ದಾರಿಯೊಂದಿಗೆ ಕೆಳಕಂಡ ಗ್ರಾಮ ಪಂಚಾಯಿತಿಗಳಿಗೆ ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಾಲೂಕಾಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.



ತಾಲೂಕು ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರಿಗೆ ರೋಣ ಮತ್ತು ನರಗುಂದ ವಿಧಾನಸಭಾ ಮತಕ್ಷೇತ್ರದ ಗ್ರಾಮ ಪಂಚಾಯತ್‌ಗಳ ಉಸ್ತುವಾರಿಯನ್ನು (ಮೊ.ಸಂ–9449446313), ಕೃಷ್ಣಗೌಡ ಎಚ್.ಪಾಟೀಲ ಅವರಿಗೆ ಹುಲಕೋಟಿ ಮತ್ತು ಕುರ್ತಕೋಟಿ ಗ್ರಾ.ಪಂಗಳ ಉಸ್ತುವಾರಿಯನ್ನು (ಮೊ.ಸಂ–9742598038), ಶಂಭು ಎಸ್.ಕಾಳೆ ಅವರಿಗೆ ವಾರ್ಡ್ ನಂ. 1, 2, 16, 21 ಮತ್ತು 15 (ಮೊ.ಸಂ–9902108686), ಮೀನಾಕ್ಷಿ ಬೆನಕಣ್ಣವರ ಅವರಿಗೆ ವಾ.ಸಂ 27, 28 ಮತ್ತು 29 (ಮೊ.ಸಂ–998038503), ಸಾವಿತ್ರಿ ಹೂಗಾರ ಅವರನ್ನು ವಾ.ಸಂ 24, 31, 32 & 35 (ಮೊ.ಸಂ–6360212737) ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಿಳಿಸಲಾಗಿದೆ.

### ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆ

# ಬೆಳಗಾವಿ ಅಧಿವೇಶನದ ಸೂಕ್ತ ಸಿದ್ಧತೆಗೆ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿವಿಧ ನಗರ ಯೋಜನಾ ಪ್ರಾಧಿಕಾರಗಳು/ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಲಭ್ಯವಿರುವ ನಿವೇಶನಗಳನ್ನು ಬ್ಲಾಕ್ ಕಾಂಗ್ರೆಸ್ ಕಛೇರಿ ನಿರ್ಮಾಣ ಮಾಡುವ ಸಲುವಾಗಿ ಕಾಂಗ್ರೆಸ್ ಭವನ ಟ್ರಸ್ಟ್ ಬೆಂಗಳೂರು ಇವರಿಗೆ ಗುತ್ತಿಗೆ ಆಧಾರದ ಮೇಲೆ ಮಾರುಕಟ್ಟೆ ಮೌಲ್ಯದ ಶೇ. 5ರಷ್ಟಕ್ಕೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ.




ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಣಯವನ್ನು ಕೈಗೊಳ್ಳಲಾಯಿತು.

ಡಿಸೆಂಬರ್ 8ರಿಂದ ಬೆಳಗಾವಿಯಲ್ಲಿ ನಡೆಯಲಿರುವ ವಿಧಾನಮಂಡಲ ಅಧಿವೇಶನದ ಬಗ್ಗೆ ಸೂಕ್ತ ತಯಾರಿ, ಸಂಬಂಧಿಸಿದವರಿಗೆ ಉತ್ತರ ಒದಗಿಸುವುದನ್ನು ಗಂಭೀರವಾಗಿ ಪರಿಗಣಿಸುವುದು, ಚರ್ಚೆಗಳ ಕುರಿತು ಮಾಡಿಕೊಳ್ಳಬೇಕಾಗಿರುವ ಸಿದ್ಧತೆಗಳ ಬಗ್ಗೆ ಮುಖ್ಯಮಂತ್ರಿ ಮಾರ್ಗದರ್ಶನ ನೀಡಿದರು.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಛ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025ರಲ್ಲಿ ನೀಡಿರುವ ನಿರ್ದೇಶನದಂತೆ ನರಗುಂದ ಪುರಸಭೆ ವ್ಯಾಪ್ತಿಯಲ್ಲಿನ ಖಾಸಗಿ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮುಖ್ಯಾಧಿಕಾರಿ ಪುರಸಭೆ ನರಗುಂದ ಇವರಲ್ಲಿ ಸಲ್ಲಿಸಬೇಕು.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು. ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸರ್ವೋಚ್ಛ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ಅಂತವರ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ನರಗುಂದ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಇಂದು ಜನ್ಮ ದಿನಾಚರಣೆ, ರಕ್ತದಾನ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಯುವ ಮುಖಂಡ ವಸಂತ ಪಡಗದ ಅವರ 38ನೇ ಜನ್ಮ ದಿನಾಚರಣೆ ಅಂಗವಾಗಿ ಡಿ. 5 ರಂದು ಬೃಹತ್ ರಕ್ತದಾನ ಶಿಬಿರ, ಅನ್ನ ಸಂತರ್ಪಣೆ ಸೇರಿದಂತೆ ವಿವಿಧ ವಿದಾಯಕ ಕಾರ್ಯಕ್ರಮಗಳನ್ನು ವಸಂತ ಪಡಗದ ಅಭಿಮಾನಿ ಬಳಗದಿಂದ ಆಯೋಜಿಸಲಾಗಿದೆ.

ಬೆಳಗ್ಗೆ 10.30 ಕ್ಕೆ ಗದಗ ನಗರದ ಹಳೆ ಬಸ್ ನಿಲ್ದಾಣದ ರಸ್ತೆಯಲ್ಲಿರುವ ಮಾಲತೇಶ ಟ್ರೇಡಿಂಗ್ ಕಂಪನಿ ಆವರಣದಲ್ಲಿ ಬೃಹತ್ ರಕ್ತದಾನ ಶಿಬಿರ, 12ಕ್ಕೆ ಗದಗ ನಗರದ ಸ್ಕೂಲ್ ನಂ. 2 ಹಾಗೂ 3 ರಲ್ಲಿ ಮಕ್ಕಳಿಗೆ ನೋಟ್ ಬುಕ್, ಡ್ರಾಯಿಂಗ್ ಕಿಟ್ ವಿತರಣೆ, ಮಧ್ಯಾಹ್ನ 1.30 ಕ್ಕೆ ಬೆಟಗೇರಿಯ ಮಂಜುನಾಥ ಶಿಕ್ಷಣ ಸಂಸ್ಥೆಯ ವಿಕಲಚೇತನ ಶಾಲೆಯ ಮಕ್ಕಳೊಂದಿಗೆ ಹಾಗೂ ಮಲ್ಲಸಮುದ್ರಲ್ಲಿರುವ ವೃದ್ಧಾಶ್ರಮದಲ್ಲಿ ಹುಟ್ಟುಹಬ್ಬ ಆಚರಣೆ ಜರುಗಲಿದೆ ಎಂದು ವಸಂತ ಪಡಗದ ಅಭಿಮಾನಿ ಬಳಗ ಪ್ರಕಟಣೆಯಲ್ಲಿ ತಿಳಿಸಿದೆ.



### ಭರವಸೆಯ ನಾಯಕ ವಸಂತ ಪಡಗದ ಸಾರ್ಥಕ ಸೇವೆಗೆ 38 ವಸಂತಗಳು

# ಗದುಗಿನ ಭರವಸೆಯ ಬೆಳಕಿನ 'ವಸಂತ'






ಎಲ್ಲರನ್ನೂ ಬೆಳೆಸುವುದರೊಂದಿಗೆ ತಾನೂ ಬೆಳೆಯುವ ಅಪರೂಪದ ಗುಣ ಹೊಂದಿರುವ ಗದಗ ನಗರದ ಮಣ್ಣಿನ ಮಗ, ಯುವ ಜನಾಂಗದ ಪ್ರೀತಿಯ ಗೆಳೆಯ ವಸಂತ ಪಡಗದ, ತನ್ನೊಟ್ಟಿಗೆ ಎಲ್ಲಾ ಸ್ನೇಹಿತರನ್ನು, ಸಮುದಾಯವನ್ನು ಬೆಳೆಸಿ, ಯುವ ನಾಯಕ ಎಂದು ಗುರುತಿಸಿಕೊಂಡಿದ್ದಲ್ಲದೇ, ಸಣ್ಣ ವಯಸ್ಸಿನಲ್ಲೇ ಸಾವಿರಾರು ಜನರ ಹೃದಯ ಗೆದ್ದಿದ್ದಾರೆ.

ಗದಗದ ನಗರದ ಒಕ್ಕಲಗೇರಿಯ ಪ್ರತಿಷ್ಠಿತ ಪಡಗದ ಮನೆತನದಲ್ಲಿ 5-12-1987ರಂದು ಜನಿಸಿದ ವಸಂತ ಪಡಗದ, ಇಂದು 38 ವಸಂತಗಳನ್ನು ಸಾರ್ಥಕವಾಗಿ ಪೂರೈಸಿ, 39ನೇ ವರ್ಷಕ್ಕೆ ಹೆಮ್ಮೆಯಿಂದ ಹೆಜ್ಜೆ ಇಡುತ್ತಿದ್ದಾರೆ. ಇದು ಕೇವಲ ಹುಟ್ಟುಹಬ್ಬವಲ್ಲ, ಸೇವೆ, ತ್ಯಾಗ ಮತ್ತು ಪ್ರೀತಿಯ ಸಾರ್ಥಕ ಸಂಭ್ರಮವಾಗಿದೆ.

ಸಮಾಜದಲ್ಲಿ ತಾನು ಯಾರು ಎಂದು ಗುರುತಿಸಿಕೊಳ್ಳುವಾಗ ವಸಂತ ಅಳವಡಿಸಿಕೊಂಡ ತತ್ವ ಒಂದೇ, ಮಾನವೀಯತೆ. ಅವರು ಜಾತಿ, ಧರ್ಮ, ಮತದ ಬೇಲಿಯನ್ನು ಮೀರಿ ಎಲ್ಲರಂತೆ ಒಬ್ಬರಾಗಿ ಬೆರೆತರು. ಎದುರಾದ ಕಷ್ಟಗಳನ್ನು ಧೈರ್ಯದಿಂದ ಎದುರಿಸಿ, ಇಂದು ಗಟ್ಟಿಯಾಗಿ ನೆಲೆಯೂರಿ ನಿಂತು ಸಮಾಜಕ್ಕೆ ತಮ್ಮದೇ ಆದ ವಿಶೇಷ ಕೊಡುಗೆ ನೀಡುವ ಮೂಲಕ ಉದಯೋನ್ಮುಖ ಯುವ ನಾಯಕರಾಗಿ ಬೆಳೆಯುತ್ತಿದ್ದಾರೆ. ಅವರ ಪ್ರತಿಯೊಂದು ನಡೆಗೂ ಸಹಬಾಳ್ವೆ ಮತ್ತು ಹೊಂದಾಣಿಕೆಯ ಮನೋಭಾವ ಎಲ್ಲರನ್ನೂ ಪ್ರೀತಿಸುವ ಗುಣವೇ ಆಧಾರವಾಗಿದೆ.

1985ರ ನಂತರ ಗದಗ ನಗರದಲ್ಲಿ ಜನತಾ ಪರಿವಾರದ ಬಹುದೊಡ್ಡ ಶಕೆ ಪ್ರಾರಂಭವಾಯಿತು. ಆ ವೇಳೆಗೆ ಅತ್ಯಂತ ಮುಂಚೂಣಿ ನಾಯಕರಾಗಿದ್ದವರು ನಿಂಗಪ್ಪ ಪಡಗದ. ಆ ಕಾಲದಲ್ಲಿ ನಿಂಗಪ್ಪ ಪಡಗದ ಎನ್ನುವ ಹೆಸರು ಹಲವಾರು ಜನರಿಗೆ ಧೈರ್ಯ ತುಂಬುವ ಶಕ್ತಿಯಾಗಿತ್ತು. ಅವರ ತಮ್ಮನ ಮಗನಾದ ವಸಂತ ಪಡಗದ ಕೂಡಾ ಅವರ ಹಾದಿಯಲ್ಲಿಯೇ ಸಾಗುತ್ತಿದ್ದು, ದೊಡ್ಡಪ್ಪನಂತೆ ನೇರ-ನಿಷ್ಠುರ ಮಾತುಗಳಿಂದ ಪರಿಚಿತವಾಗಿರುವುದರೊಟ್ಟಿಗೆ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ. ನಿಂಗಪ್ಪ ಪಡಗದ ಅವರ ನೇರ ವಾರಸುದಾರರಂತೆ ಗದಗನ ಗಂಡು ಮಟ್ಟಿನ ನಾಡಿನಲ್ಲಿ ಬೆಳೆದು ಬಂದಿದ್ದು, ದೊಡ್ಡಪ್ಪನ ಸಮಾಜಮುಖಿ ಹಾದಿಯಲ್ಲಿಯೇ ಸಾಗುತ್ತಿದ್ದಾರೆ.

ಅತ್ಯಂತ ಸಣ್ಣ ವಯಸ್ಸಿನಲ್ಲಿಯೇ ಗದಗ-ಬೆಟಗೇರಿ ನಗರಸಭೆಗೆ ಎರಡು ಬಾರಿ ಸ್ಪರ್ಧಿಸಿರುವ ವಸಂತ ಎರಡು ಬಾರಿಯೂ ಸೋಲನುಭವಿಸಿದ್ದಾರೆ. ಆದರೆ ಸೋತರೂ ಸಮಾಜ ಸೇವೆಯನ್ನು ಮಾತ್ರ ನಿರಂತರವಾಗಿ ನಡೆಸಿಕೊಂಡು ಬಂದಿದ್ದು, ಇಂದಿಗೂ ಅವರ ಬಳಿ ನೂರಾರು ಜನರು ತಮ್ಮ ಸಮಸ್ಯೆ ಹೊತ್ತು ಬಂದಾಗ ಕ್ಷಣಾರ್ಧದಲ್ಲಿಯೇ ಅದನ್ನು ಸರಿಪಡಿಸಿ, ನನಗೆ ಸಮಾಜ ಸೇವೆಯೇ ಮುಖ್ಯ ಎನ್ನುವ ಅವರ ಧ್ಯೇಯ ಹೊಸ ತಲೆಮಾರಿನ ರಾಜಯಕೀಯದಲ್ಲಿ ಹೊಸ ಮನ್ವಂತರವನ್ನು ಸೃಷ್ಟಿಸುವ ಕಾಲ ದೂರವಿಲ್ಲ.

ವಸಂತ ಪಡಗದ ಅವರಿಗೆ ಸಮಾಜ ಸೇವೆ ಎಂದರೆ ಕೇವಲ ಒಂದು ಕೆಲಸವಲ್ಲ, ಅದೊಂದು ಜೀವನ ಧರ್ಮ. ಅತ್ಯಂತ ಕಿರಿಯ ವಯಸ್ಸಿನಲ್ಲಿಯೇ ಸಾರ್ವಜನಿಕ ಹೋರಾಟಕ್ಕೆ ಧುಮುಕಿದ ಅವರಿಗೆ ಮೊದಲು ವೇದಿಕೆ ಕೊಟ್ಟಿದ್ದು ಕದಂಬ ಸೇನೆ. ಈ ಸಂಘಟನೆಯ ಮೂಲಕ ಹಲವಾರು ವರ್ಷಗಳ ಕಾಲ ನಾಡು-ನುಡಿಯ ಸೇವೆ ಮಾಡಿರುವ ಅವರು ಎಲ್ಲಾ ರೀತಿಯ ಹೋರಾಟಗಳಲ್ಲಿ ಗದಗ ಜಿಲ್ಲೆಯ ಪರವಾಗಿ ಅತ್ಯಂತ ಗಟ್ಟಿ ಧ್ವನಿ ಎತ್ತುವ ಮೂಲಕ ತಮ್ಮ ಊರಿನ ಪ್ರಾತಿನಿಧಿಕತೆಯನ್ನು ಪ್ರಸ್ತುತಪಡಿಸಿದ್ದರು. ನಂತರ ರಾಜ್ಯವೇ ಗದಗ ಜಿಲ್ಲೆಯತ್ತ ನೋಡುವಂತೆ ನಡೆದ ಕಳಸಾ-ಬಂಡೂರಿ ಹೋರಾಟದಲ್ಲಿಯೂ ಮುಂಚೂಣಿಯಲ್ಲಿ ನಿಂತು ನಡೆಸಿದ ಅವರ ಹೋರಾಟದ ಬದುಕು ಮುಂದೆ ಅದು ಅವರ ಸೇವಾ ಪಯಣವಾಗಿ ಮಾರ್ಪಟ್ಟಿದ್ದು ಇಂದು ಹಲವಾರು ಕ್ಷೇತ್ರಗಳಲ್ಲಿ ಹರಡಿದೆ.

ನೇರವಾಗಿ ಮಾತನಾಡುವುದು ಇವರ ಶಕ್ತಿ ಎಂದು ಕೆಲವರು ನಂಬಿದ್ದರೆ, ಅದನ್ನೇ ಟೀಕೆ ಮಾಡುವವರೂ ಇದ್ದಾರೆ. ಇದೆಲ್ಲರ ಮಧ್ಯೆ ಬಡವರು ಮತ್ತು ಶೋಷಿತರ ನೋವಿಗೆ ಸ್ಪಂದಿಸಿ, ಅವರ ನೆರವಿಗೆ ನಿಲ್ಲುವ ಸಂವೇದನೆಯ ಹೃದಯ ಅವರದು.

ಸ್ನೇಹಿತರ ಬಳಗದೊಂದಿಗೆ ನಿರಂತರವಾಗಿ ರಕ್ತದಾನ ಶಿಬಿರ, ನೆರೆ ಸಂತ್ರಸ್ತರಿಗೆ ಆಶ್ರಯ ಮತ್ತು ಸಹಾಯ, ಉಚಿತ ಆರೋಗ್ಯ ತಪಾಸಣೆ ಶಿಬಿರಗಳನ್ನು ಆಯೋಜಿಸುವ ಮೂಲಕ ಸಮಾಜದಲ್ಲಿ ಸಮಾಜವಾಗಿ ಬೆರೆತು ಹೋಗಿದ್ದಾರೆ. ಇದರೊಟ್ಟಿಗೆ ಜ್ಞಾನ ದಾಸೋಹವನ್ನು ಪಸರಿಸುತ್ತಾ ನಾಳಿನ ಪ್ರಜೆಗಳಾದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಪುಸ್ತಕ ವಿತರಣೆ ಮತ್ತು ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಗೆ ಅಗತ್ಯ ಪರಿಕರಗಳ ನೆರವು ನೀಡುವ ಮೂಲಕ ಜ್ಞಾನದ ಬೆಳಕನ್ನು (ಜ್ಯೋತಿಯನ್ನು) ಹಂಚುತ್ತಿದ್ದಾರೆ.

ನಾಡು-ನುಡಿಯ ಸೇವೆ ಪರಿಸರ ಸಂರಕ್ಷಣೆ, ನೆಲ-ಜಲ ಮತ್ತು ನಾಡು-ನುಡಿ ರಕ್ಷಣೆ ಕುರಿತು ಸದಾ ಜಾಗೃತರಾಗಿರುವ ವಸಂತ ಅವರು, ಕನ್ನಡ ನೆಲದ ಕಾವಲುಗಾರರಾಗಿದ್ದಾರೆ. ನಾಡು-ನುಡಿಗೆ ಧಕ್ಕೆ ಬಂದಾಗ ಹೋರಾಟ ಮಾಡುವ ಜನ ಮಾನಸದಲ್ಲಿ ಅದರಲ್ಲಿಯೂ ಯುವ ಸಮುದಾಯಕ್ಕೆ ದೊಡ್ಡ ಭರವಸೆಯ ಬೆಳಕಾಗಿದ್ದಾರೆ. ಅಪ್ಪಟ ಕ್ರೀಡಾಪ್ರೇಮಿಯಾಗಿರುವ ಅವರು ಗದಗ ನಗರದಲ್ಲಿ ಇದುವರೆಗೂ ನಡೆದಿರುವ, ನಡೆಯುತ್ತಿರುವ ಎಲ್ಲಾ ಕ್ರೀಡಾ ಚಟುವಟಿಕೆಗಳಿಗೆ ತಮ್ಮ ದಾನದ ಮೂಲಕ ಯುವಕರಲ್ಲಿ ಹೊಸ ಉತ್ತೇಜನಕ್ಕೆ ಅವರಲ್ಲಿರುವ ಪ್ರತಿಭೆಗಳ ಅನಾವರಣಕ್ಕೆ ಪ್ರಮುಖ ವೇದಿಕೆಯಾಗಿದ್ದಾರೆ.

ಜನರ ಸೇವೆ ಮಾಡಲು ಅಧಿಕಾರವೇ ಬೇಕಿಲ್ಲ. ಅದಕ್ಕೆ ಬೇಕಾದದ್ದು ಇಚ್ಛಾಶಕ್ತಿ, ಸಾಮಾಜಿಕ ಮನೋಭಾವ ಮತ್ತು ಹಿರಿಯರ ಪರಂಪರೆಯನ್ನು ಮುಂದುವರೆಸುವ ಹಂಬಲವಷ್ಟೇ. ಈ ಎಲ್ಲ ಗುಣಗಳನ್ನು ಮೈಗೂಡಿಸಿಕೊಂಡಿರುವ ವಸಂತ ಪಡಗದ ಅವರು, ನಿಜಕ್ಕೂ ಗದಗ ಜಿಲ್ಲೆಯ ಭವಿಷ್ಯದ ಭರವಸೆಯ ಯುವ ನಾಯಕರಾಗಿದ್ದಾರೆ.



ವಸಂತ ಪಡಗದ ಅವರಿಗೆ ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು. ಅವರ ಸಮಾಜ ಸೇವೆಯ ಪಯಣ ಇನ್ನಷ್ಟು ಯಶಸ್ವಿಯಾಗಲಿ ಎಂದು ಹಾರೈಸುತ್ತೇವೆ.

**- ಪ್ರವೀಣಕುಮಾರ ಮಾಂತಾ.**
ಪತ್ರಕರ್ತರು, ಗದಗ.

ಧರ್ಮ ಕಾರ್ಯಕ್ರಮಗಳಿಗೆ ಹೆಚ್ಚಿನ ಉತ್ತೇಜನ ನೀಡಿದ ಕುಟುಂಬದ ಹಿನ್ನೆಲೆಯಿಂದ ಬಂದಿರುವ ವಸಂತ ಅವರಿಗೆ, ಧಾರ್ಮಿಕ ಸಾಮರಸ್ಯವೇ ಮುಖ್ಯ. ಜಾತಿ-ಮತ ಭೇದವಿಲ್ಲದೆ ಸಾರ್ವಜನಿಕ ಗಣೇಶೋತ್ಸವ, ಜಾತ್ರೆ, ದೇವಸ್ಥಾನ ನಿರ್ಮಾಣ, ಮತ್ತು ಅನ್ನದಾನದಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಸರ್ವಧರ್ಮ ಸಮನ್ವಯದ ಸಂದೇಶವನ್ನು ಸಾರುತ್ತಾ ಹಳೆಯ ತಲೆಮಾರಿನ ಜ್ಞಾನವನ್ನು ಹೊಸ ತಲೆಮಾರಿಗೆ ತಲುಪಿಸುವಲ್ಲಿ ಮಹತ್ವದ ಕೊಂಡಿಯಾಗಿದ್ದಾರೆ. ಕಲೆ, ಸಂಗೀತ ಸೇರಿದಂತೆ ಸಂಸ್ಕೃತಿಯ ವಿಷಯದಲ್ಲಿ ವಿಶೇಷ ಮತ್ತು ಅಮೂಲ್ಯ ಇತಿಹಾಸ ಹೊಂದಿರುವ ಗದಗ ನಗರದ ಸಾಹಿತ್ಯ, ಕಲೆ, ಸಂಸ್ಕೃತಿಯ ವಾರಸುದಾರರಂತೆ ಜವಾಬ್ದಾರಿಯನ್ನು ನಿಭಾಯಿಸುತ್ತಿದ್ದಾರೆ.

ಪ್ರತಿ ವರ್ಷ ಅವರ ಹುಟ್ಟುಹಬ್ಬವನ್ನು ವಸಂತ ಪಡಗದ ಮತ್ತು ಅವರ ಅಭಿಮಾನಿ ಬಳಗ ಅತ್ಯಂತ ಅರ್ಥಪೂರ್ಣವಾಗಿ ಆಚರಿಸುತ್ತಾರೆ. ಅದು ಕೇವಲ ಔತಣಕೂಟವಲ್ಲ, ಅದನ್ನೊಂದು ಸೇವಾ ದಿನವನ್ನಾಗಿ ಮಾರ್ಪಡಿಸಿದ್ದಾರೆ. ವೀರೇಶ್ವರ ಪುಣ್ಯಾಶ್ರಮದಲ್ಲಿ ಉಪಹಾರ ಸೇವೆ, ರಕ್ತದಾನ ಶಿಬಿರ ಆಯೋಜನೆ, ಬುದ್ಧಿಮಾಂದ್ಯ ಮಕ್ಕಳೊಂದಿಗೆ ಹುಟ್ಟುಹಬ್ಬ ಆಚರಣೆ ಮಾಡಿಕೊಳ್ಳುವ ಮೂಲಕ ಅವರು ನಕ್ಕಾಗ ವಸಂತ ಅವರ ಮುಖದಲ್ಲಿ ಕಾಣುವ ತೃಪ್ತಿಯೇ ವಿಶೇಷವಾಗಿರುತ್ತದೆ.

### ಭರವಸೆಯ ನಾಯಕ

ವಸಂತ ಪಡಗದ ಅವರ ಹೆಸರಿಂದು ಗದಗಿನಲ್ಲಿ ಚಿರಪರಿಚಿತ. ಅವರು ಎಂದಿಗೂ ಅಧಿಕಾರಕ್ಕಾಗಿ ಹಂಬಲಿಸಿದವರಲ್ಲ, ಆದರೆ ಸಮಾಜ ಸೇವೆಯನ್ನು ಬಿಟ್ಟವರಲ್ಲ. ತಮ್ಮ ಕೆಲಸ ಕಾರ್ಯಗಳ ಮೂಲಕ ಜನರೊಂದಿಗೆ ಆತ್ಮೀಯರಾಗಿ ಬೆಳೆದಿದ್ದಾರೆ. ಗದಗ ಮಾತ್ರವಲ್ಲದೆ ಸುತ್ತಮುತ್ತಲಿನ ಜಿಲ್ಲೆಗಳ ಜನರೂ ಇವರನ್ನು ಭರವಸೆಯ ನಾಯಕರಾಗಿ ಕಾಣುತ್ತಿದ್ದಾರೆ.

### ರೋಟರಿ ಗದಗ ಸೆಂಟ್ರಲ್, ಐಡಿಬಿಐ ಬ್ಯಾಂಕ್ ಸಹಯೋಗ

# ಶುದ್ಧ ಕುಡಿಯುವ ನೀರಿನ ಘಟಕಗಳ ಕೊಡುಗೆ



**■ವಿಜಯಸಾಕ್ಷಿ ಸುದ್ದಿ, ಗದಗ**

ರೋಟರಿ ಗದಗ ಸೆಂಟ್ರಲ್ ಹಾಗೂ ಐಡಿಬಿಐ ಬ್ಯಾಂಕ್ ಸಹಯೋಗದಲ್ಲಿ ಗದಗ ತಾಲೂಕಿನ ಯಲಿಶಿರೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೊಡುಗೆ ನೀಡಲಾಯಿತು.

ರೋಟರಿ ಗದಗ ರೆವಿನ್ಯೂ ಡಿಸ್ಟ್ರಿಕ್ಟ್‌ನ ಅಸಿಸ್ಟಂಟ್ ಗವರ್ನರ್ ವಿ.ಕೆ. ಗುರುಮಠ ಮತ್ತು ಮಾಜಿ ಅಸಿಸ್ಟಂಟ್ ಗವರ್ನರ್ ಎಂ.ಸಿ. ಐಲಿ ಮಾತನಾಡಿ, ರೋಟರಿ ಸಂಸ್ಥೆ ಸಾರ್ವಜನಿಕರಿಗಾಗಿ ಹಮ್ಮಿಕೊಂಡ ಮತ್ತು ಹಮ್ಮಿಕೊಳ್ಳುತ್ತಿರುವ ಸೇವಾ ಕಾರ್ಯಗಳ ಕುರಿತು ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ತಿಳಿಸಿದರು.

ಐಡಿಬಿಐ ಬ್ಯಾಂಕ್ ಗದಗ ಶಾಖೆಯ ವ್ಯವಸ್ಥಾಪಕ ವಿಕ್ರಂ ಕಡೆಮನೆ ಮಾತನಾಡಿ, ತಮ್ಮ ಬ್ಯಾಂಕ್ ಕೂಡ ಸಾರ್ವಜನಿಕರ ಹಿತಕ್ಕೆ, ಸಾಮಾಜಿಕ ಕಾರ್ಯಗಳಿಗೆ ಸಹಕಾರ ನೀಡುತ್ತದೆ. 150 ಲೀಟರ್ ಸಾಮರ್ಥ್ಯದ ರೂ. 85 ಸಾವಿರಕ್ಕೆ ಒಂದು ಘಟಕದಂತೆ ಈ ಎರಡೂ ಶಾಲೆಗೆ 1 ಲಕ್ಷ 70 ಸಾವಿರ ರೂ ಮೌಲ್ಯದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನೀಡಲಾಗಿದೆ ಎಂದರು.

ಬ್ಯಾಂಕಿನ ರೀಜನಲ್ ಆಫೀಸರ್ ರಮೇಶ್ ಅವರು ನೀರಿನ ಘಟಕಗಳನ್ನು ಉದ್ಘಾಟಿಸಿದರು. ರೋಟರಿ ಗದಗ ಸೆಂಟ್ರಲ್ ಅಧ್ಯಕ್ಷ ಚೇತನ್ ಅಂಗಡಿ ಮಾತನಾಡಿ, ಮಕ್ಕಳ ಆರೋಗ್ಯದ ದೃಷ್ಟಿಯಿಂದ ಈ ಎರಡೂ ಶಾಲೆಗಳಿಗೆ ಬ್ಯಾಂಕಿನವರ ಸಹಕಾರದೊಂದಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನೀಡಿದ್ದೇವೆ. ನಮ್ಮ ಸಂಸ್ಥೆ ಮಕ್ಕಳಿಗೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸಲು ಯಾವಾಗಲೂ ಸಿದ್ಧವಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯೆ ರಾಧಾ ಜಾಲರಡ್ಡಿ, ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ ಯಲಿ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯೆ ಪ್ರಗತಿ ಗುಡ್ಡದ, ಎಸ್‌ಡಿಎಂಸಿ ಅಧ್ಯಕ್ಷ ಎನ್.ಎಫ್. ಪಾಟೀಲ, ರೋಟರಿ ಸೆಂಟ್ರಲ್ ಕಾರ್ಯದರ್ಶಿ ರಾಜು ಉಮನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಸುರೇಶ ಅಬ್ಬಿಗೇರಿ, ವಿಜಯ್ ಕುವಾರ್ ಹಿರೇಮಠ, ಮಂಜುನಾಥ್ ಕಬಾಡಿ, ಹುಬ್ಬಳ್ಳಿ ರೆವಿನ್ಯೂ ಡಿಸ್ಟ್ರಿಕ್ಟ್‌ನ ಅಸಿಸ್ಟಂಟ್ ಗವರ್ನರ್ ಸುನೀಲ ಮಿರಜಕರ ಹಾಗೂ ರೋಟರಿ ಸದಸ್ಯರು, ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

# ಸ್ವಚ್ಛತೆ, ಆರೋಗ್ಯದ ಅರಿವು ಮೂಡಿಸಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯ ಮತ್ತು ಸ್ವಚ್ಛತೆ, ಶೌಚಾಲಯ ವ್ಯವಸ್ಥೆ, ಕುಡಿಯುವ ನೀರಿನ ಬಳಕೆ ಮೊದಲಾದ ಮೂಲ ವಿಷಯಗಳ ಕುರಿತು ಗ್ರಾಮೀಣ ಕೂಟದ ಸದಸ್ಯರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಪ್ರತಿ ಮನೆಗೂ ತೆರಳಿ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಜಾಗೃತಿ ಮೂಡಿಸಬೇಕು ಎಂದು ಗದಗ ಪ್ರಭಾರಿ ತಾಲೂಕು ಆರೋಗ್ಯಾಧಿಕಾರಿ ಡಾ. ಚೇತನ ಹೊಸೂರ ಹೇಳಿದರು.


ತಾಲೂಕಿನ ಅಸುಂಡಿ ಗ್ರಾಮದಲ್ಲಿ ಗದಗ ಶಹರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ ಹುಬ್ಬಳ್ಳಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಆರೋಗ್ಯ ಅರಿವು ಮತ್ತು ವೈಯಕ್ತಿಕ ನೈರ್ಮಲ್ಯ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಆರೋಗ್ಯ ಎಂದರೆ ಸಂಪೂರ್ಣ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮದ ಸ್ಥಿತಿ. ಕೇವಲ ರೋಗಗಳ ಅನುಪಸ್ಥಿತಿಯಲ್ಲ. ನೈರ್ಮಲ್ಯ ಎಂದರೆ ತನ್ನನ್ನು ಮತ್ತು ತನ್ನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಅಭ್ಯಾಸಗಳು ಮತ್ತು ಪರಿಸ್ಥಿತಿಗಳು. ಒಟ್ಟಾಗಿ, ಅವು ಆರೋಗ್ಯಕರ, ತೃಪ್ತಿಕರ ಜೀವನಕ್ಕೆ ಅಡಿಪಾಯವನ್ನು ರೂಪಿಸುತ್ತವೆ ಎಂದರು.

ಉಪನ್ಯಾಸಕಿ ಡಾ. ಜ್ಯೋತಿ ಸಿ.ವಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಸರ್ವತೋಮುಖ ಅಭಿವೃದ್ಧಿಗಾಗಿ ವೈಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಆರೋಗ್ಯ ರಕ್ಷಣೆಯ ಮಹತ್ವದ ಬಗ್ಗೆ ಸಮಾಜದಲ್ಲಿ ಜಾಗೃತಿ ಮೂಡಿಸಲು ಎನ್.ಎಸ್.ಎಸ್ ಸ್ವಯಂಸೇವಕರನ್ನು ಸ್ವಯಂ ಪ್ರೇರಣೆಯಿಂದ ಒಂದು ಹೆಜ್ಜೆ ಮುಂದೆ ಹಾಕಬೇಕು ಎಂದರು.

ಉಪನ್ಯಾಸಕರಾದ ಡಾ. ವಿಜಯ ಮುರುದಂಡೆ ಮಾತನಾಡಿದರು. ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಡಾ. ಸಿ.ಬಿ. ರಣಗಟ್ಟಿಮಠ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಭಾವನಾ ಪ್ರಾರ್ಥಿಸಿದರು. ಅಲ್ಲಮಸಾಬ ನದಾಫ್ ಸ್ವಾಗತಿಸಿದರು. ರಮೇಶ ನಿರೂಪಿಸಿದರು. ವಿಶ್ವಾ ಹಿರೇಮಠ ವಂದಿಸಿದರು.

# ಗುರಿ ಮುಟ್ಟುವ ಕಡೆ ಹೆಜ್ಜೆಯಿರಲಿ



**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಮಣ್ಣಿನಿಂದಾದ ಮಡಿಕೆ ಒಂದು ದಿನ ನಾಶವಾಗುತ್ತದೆ. ಆದರೆ ಮಣ್ಣು ನಾಶವಾಗುವುದಿಲ್ಲ. ಪ್ರಪಂಚದ ತುಂಬೆಲ್ಲ ತುಂಬಿದ್ದಾನೆ ಪರಮಾತ್ಮ. ಆದರೆ ಕಣ್ಣಿಗೆ ಕಾಣುವುದಿಲ್ಲ. ಆಧ್ಯಾತ್ಮದ ಅರಿವು ಮತ್ತು ಸಾಧನೆಯಿಂದ ಬದುಕಿನಲ್ಲಿ ಉನ್ನತಿ ಸಾಧಿಸಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಎಲ್ಲಿ ಹುಟ್ಟಬೇಕು ಅನ್ನುವುದು ನಮ್ಮ ಕೈಯಲ್ಲಿಲ್ಲ. ಆದರೆ ಎಲ್ಲಿ ಮುಟ್ಟಬೇಕು ಅನ್ನುವುದು ನಮ್ಮ ಕೈಯಲ್ಲಿದೆ. ಗುರಿ ಮುಟ್ಟುವ ತನಕ ಮನುಷ್ಯನ ಹೆಜ್ಜೆಯಿರಬೇಕು. ಸೂರ್ಯ ಆರಂಭದಲ್ಲಿ ಕೆಂಪಾಗಿ ಉದಯಿಸಿ, ಕೆಂಪಾಗಿಯೇ ಅಸ್ತನಾಗುತ್ತಾನೆ. ಅದೇ ರೀತಿ ಮಹಾತ್ಮರು ಸಂಪತ್ತಿರಲಿ-ವಿಪತ್ತಿರಲಿ, ಸುಖವಿರಲಿ-ದುಃಖವಿರಲಿ ಯಾವಾಗಲೂ ಒಂದೇ ರೀತಿ ಬಾಳುತ್ತಾರೆ. ಸಹನೆಯಿಲ್ಲದ ಹೆಂಡತಿ, ಸಂಪಾದನೆಯಿಲ್ಲದ ಗಂಡ, ಮಾತು ಕೇಳದ ಮಕ್ಕಳು ಸುಖ ಸಂಸಾರದ ಶತ್ರುಗಳು. ಜ್ಞಾನದಿಂದ ಅಧಿಕಾರ ದೊರೆಯಬಹುದು. ಆದರೆ ಗೌರವ ಸಿಗಬೇಕಾದರೆ ವ್ಯಕ್ತಿತ್ವ ಸಂಪಾದಿಸಿಕೊಳ್ಳಬೇಕಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬದುಕಿನ ಉನ್ನತಿ ಮತ್ತು ಶ್ರೇಯಸ್ಸಿಗಾಗಿ ಬೋಧಿಸಿದ ಶಿವಾದ್ವೈತ ಜ್ಞಾನ ಸಂಪತ್ತು ಸಕಲರನ್ನು ಉದ್ಧರಿಸುತ್ತದೆ ಎಂದರು.

ಕಲ್ಲುಬಾಳುಮಠದ ಶಿವಾನಂದ ಶಿವಾಚಾರ್ಯರು, ಹುಡುಗಿ ಹಿರೇಮಠ ಸೋಮೇಶ್ವರ ಶಿವಾಚಾರ್ಯರು, ಬಿಡದಿಮಠದ ಶ್ರೀಗಳು, ಕಲ್ಲಹಳ್ಳಿ ಶ್ರೀಗಳು ಸಮಾರಂಭದಲ್ಲಿ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಪ್ರಭುದೇವ ಕಲ್ಮಠ, ಎಂ. ಕೊಟ್ರೇಶಪ್ಪ, ಬಾಸಾಪುರದ ಬಿ.ಎಂ. ಭೋಜೇಗೌಡರು, ಕಡವಂತಿ ಅಣ್ಣೇಗೌಡರು, ಶಿರವಾಸೆ ವಿಶ್ವನಾಥ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ನಾಡಿನೆಲ್ಲೆಡೆಯಿಂದ ಆಗಮಿಸಿದ ಭಕ್ತರು ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು. ಹುಣ್ಣಿಮೆ ನಿಮಿತ್ತ ಶ್ರೀಪೀಠದ ಎಲ್ಲ ದೈವಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಆಗಮಿಸಿದ ಸಕಲ ಸದ್ಭಕ್ತರಿಗೆ ಪ್ರಸಾದ ವಿನಿಯೋಗ ಜರುಗಿತು.

# ಲಕ್ಷ್ಮಮ್ಮ ಪಾಟೀಲ ನಿಧನ : ನೇತ್ರದಾನಕ್ಕೆ ಕುಟುಂಬದ ಸಮ್ಮತಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕಳಸಾಪುರ ರಸ್ತೆಯ ನಿವಾಸಿ ಲಕ್ಷ್ಮಮ್ಮ ಆರ್.ಪಾಟೀಲ (95) ಅವರು ಮಂಗಳವಾರ ರಾತ್ರಿ ನಿಧನರಾದರು. ಮೃತರು ಗದುಗಿನ ಹಿರಿಯ ಇಂಜಿನಿಯರ್ ಎಂ.ಆರ್. ಪಾಟೀಲ ಸೇರಿದಂತೆ ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಬಿಟ್ಟು ಅಗಲಿದ್ದಾರೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ಮೃತರ ನೇತ್ರ ದಾನ ನೀಡುವಂತೆ ಪ್ರೇರಣೆ ನೀಡಿದರು. ಕುಟುಂಬದವರ ಒಪ್ಪಿಗೆಯಂತೆ ಹುಬ್ಬಳ್ಳಿಯ ಕಣ್ಣಿನ ಆಸ್ಪತ್ರೆಯ ತಜ್ಞರ ತಂಡ ನೇತ್ರದಾನದ ಪ್ರಕ್ರಿಯೆ ಕೈಗೊಂಡಿತು. ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರು, ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಝೋನ್ ಚೇರ್‌ಪರಸನ್ ರಮೇಶ ಶಿಗ್ಲಿ, ಲಯನ್ ಲೇಡಿಸ್ ವಿಂಗ್ ಅಧ್ಯಕ್ಷೆ ಪೂಜಾ ಪಾಟೀಲ ಮುಂತಾದವರಿದ್ದರು.

ಸಾರ್ವಜನಿಕರು ತಮ್ಮ ಮರಣದ ಬಳಿಕ ನೇತ್ರದಾನ ಮಾಡಲು ಮೊದಲೇ ಒಪ್ಪಿಗೆ ಪತ್ರಕ್ಕೆ ಸಹಿ ಮಾಡಿ ಕುಟುಂಬಕ್ಕೆ ತಿಳಿಸಿರಬೇಕು. ನೋಂದಣಿ ಮಾಡದಿದ್ದರೂ ವ್ಯಕ್ತಿಯ ಸಾವಿನ ಬಳಿಕ ಕುಟುಂಬದ ಒಪ್ಪಿಗೆ ಮೇರೆಗೆ ನೇತ್ರದಾನದ ಪ್ರಕ್ರಿಯೆ ನಡೆಸಬಹುದು. ಮರಣದ ನಂತರ ಮಣ್ಣಲ್ಲಿ ಮಣ್ಣಾಗುವ/ಬೆಂಕಿಯಲ್ಲಿ ಭಸ್ಮವಾಗುವ ನೇತ್ರಗಳನ್ನು ಮರಣದ ತಕ್ಷಣ ದಾನ ಮಾಡಿದರೆ ಕಣ್ಣಿಲ್ಲದವರು ಜಗತ್ತನ್ನು ನೋಡಬಹುದು. ಈ ಪುಣ್ಯದ ಕಾರ್ಯಕ್ಕೆ ಕುಟುಂಬದವರು ಸಹಕರಿಸಬೇಕು ಎಂದು ಲಯನ್ಸ್ ಕ್ಲಬ್ ಅಧ್ಯಕ್ಷ ರಾಜಣ್ಣ ವೇರ್ಣೆಕರ ಮನವಿ ಮಾಡಿದ್ದಾರೆ.

# ಹೆಚ್ಐವಿ ಕುರಿತು ಜಾಗೃತಿ ಮೂಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದು ಹೆಚ್ಐವಿ ಏಡ್ಸ್ ನಿಯಂತ್ರಣದಲ್ಲಿ ಯುವಕರ ಪಾತ್ರ ಮುಖ್ಯವಾಗಿದ್ದು, ಹೆಚ್ಐವಿ ಮುಕ್ತ ಸಮಾಜ ನಿರ್ಮಾಣ ಮಾಡಲು ಯುವಕರು, ಕಾಲೇಜು ವಿದ್ಯಾರ್ಥಿಗಳು ಗ್ರಾಮೀಣ ಜನರಲ್ಲಿ ಜಾಗೃತಿ ಮೂಡಿಸಲು ಕೈಜೋಡಿಸಬೇಕೆಂದು ಆಪ್ತಸಮಾಲೋಚಕರಾದ ಗಂಗಾಧರ ಕೆಂಗಾರ ಕರೆ ನೀಡಿದರು.

ಅವರು ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗದಗ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಮತ್ತು ಡ್ಯಾಪ್ಕೋ ಪ್ರಾಥಮಿಕ ಆರೋಗ್ಯ ಕೇಂದ್ರ, ಲಕ್ಕುಂಡಿ ಸರ್ಕಾರಿ ಪ್ರೌಢಶಾಲೆ ಹಾಗೂ ಆಯುಷ್ಮಾನ್ ಆರೋಗ್ಯ ಮಂದಿರ ಅಡವಿಸೋಮಾಪೂರ ಇವರುಗಳು ಸಂಯುಕ್ತವಾಗಿ ಏರ್ಪಡಿಸಿದ್ದ ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಹೆಚ್ಐವಿ ಸೋಂಕಿತರಿಗೆ ಮತ್ತು ಬಾಧಿತರರಿಗೆ ಆಗುವ ಅಸಮಾನತೆಯನ್ನು ತೊಲಗಿಸಲು ಮುಂದಾಗಬೇಕು. ನೊಂದವರಿಗೆ ಸೌಲಭ್ಯ ನೀಡುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು.

ಸಂಸತ್ತಿನಲ್ಲಿ ಹೆಚ್.ಐ.ವಿ ಏಡ್ಸ್ ಮಸೂದೆ–2017 ಪಾಸಾಗಿದ್ದು, ಸೋಂಕಿತರಿಗೆ, ಬಾಧಿತರಿಗೆ ತಾರತಮ್ಯ ಮಾಡಿದರೆ, ಕೀಳಾಗಿ ನೋಡಿದರೆ ಅಂತಹವರಿಗೆ ಶಿಕ್ಷೆಯಾಗಿ ಒಂದು ಲಕ್ಷದವರೆಗೆ ದಂಡವನ್ನು ಹಾಗೂ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಬಹುದು ಎಂದು ಮಾಹಿತಿ ನೀಡಿದರು.


### ಹಿರೇಗುಂಜಳದ ಸಾವಯವ ಕೃಷಿಕ ಮಲ್ಲೇಶಪ್ಪ ಬಿಸಿರೊಟ್ಟಿ ಅವರಿಗೆ 'ಬಸವ ಕೃಷಿ' ಪ್ರಶಸ್ತಿ ಪ್ರದಾನ

# ಸಗಣಿ ಗೊಬ್ಬರದಲ್ಲಿ ಅಗಾಧವಾದ ಶಕ್ತಿಯಿದೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹೆಚ್ಚು ವಿದ್ಯಾಭ್ಯಾಸ ಪಡೆಯದಿದ್ದರೂ ಸಹ ಕೃಷಿಯಲ್ಲಿ ಅಪಾರವಾದ ಅನುಭವ ಹಾಗೂ ಪ್ರಗತಿಪರ ಕಾರ್ಯಕ್ಷಮತೆ ಹೊಂದಿ ಓರ್ವ ಶಿಸ್ತುಬದ್ಧ, ಶ್ರೇಷ್ಠ ಕೃಷಿಕರಾಗಿ ಅಮ್ಮಿನಬಾವಿ ಗ್ರಾಮದ ದಿ. ಬಸಪ್ಪ ಮುಂದಿನಮನಿ ಎಲ್ಲರ ಗಮನಸೆಳೆದಿದ್ದರು ಎಂದು ಹಿರಿಯ ಕಾನೂನು ತಜ್ಞ, ಕವಿವ ಸಂಘದ ಗೌರವ ಉಪಾಧ್ಯಕ್ಷ ಕೆ.ಬಿ. ನಾವಲಗಿಮಠ ಹೇಳಿದರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘವು ಧಾರವಾಡ ತಾಲೂಕು ಅಮ್ಮಿನಬಾವಿ ಗ್ರಾಮದ ಶ್ರೇಷ್ಠ ಕೃಷಿಕ ದಿ. ಬಸಪ್ಪ ಶಂಕ್ರೆಪ್ಪ ಮುಂದಿನಮನಿ ದತ್ತಿ ಸಂಸ್ಮರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕೃಷಿ ಉಪನ್ಯಾಸ ಮತ್ತು ಬಸವ ಕೃಷಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ




ಮಾತನಾಡುತ್ತಿದ್ದರು.

ಯಾವುದೇ ಕ್ಷೇತ್ರದಲ್ಲಿ ಮಾಡಿದ ಸಾಧನೆಯ ಮೂಲಕ ವ್ಯಕ್ತಿಯು ಸಾವಿನ ನಂತರವೂ ಎಲ್ಲರ ಮನದಲ್ಲಿ ಜೀವಂತವಾಗಿರುತ್ತಾನೆ. ಅವರ ಜನಪರ ಕಾರ್ಯ–ಚಿಂತನೆಗಳು ಸ್ಮರಣೆಗೆ ಪರಿಗಣಿತವಾಗುತ್ತವೆ ಎಂದು ಹೇಳಿದರು.

'ಬಸವ ಕೃಷಿ ಪ್ರಶಸ್ತಿ' ಸ್ವೀಕರಿಸಿ ಉಪನ್ಯಾಸ ನೀಡಿದ ಹಿರೇಗುಂಜಳದ ಶ್ರೇಷ್ಠ ಸಾವಯವ ಕೃಷಿಕ ಮಲ್ಲೇಶಪ್ಪ ಬಿಸಿರೊಟ್ಟಿ, ರೈತರು ಕೇವಲ ಸೆಗಣಿ ಗೊಬ್ಬರವನ್ನು ಮಾತ್ರ ಬಳಕೆ ಮಾಡಿ ಕೃಷಿ ಮಾಡಬೇಕು. ಸಗಣಿ ಗೊಬ್ಬರದಲ್ಲಿ ಅಗಾಧವಾದ ಶಕ್ತಿ ಸಂಚಯವಿದ್ದು, ಇದು ಭೂಮಿಯ ಮಣ್ಣಿನ ಕಣಗಳಲ್ಲಿ ನಿರಂತರ ತೇವಾಂಶವನ್ನು ಹಿಡಿದಿಟ್ಟುಕೊಳ್ಳುವ ವಿಶಿಷ್ಟ ಸಾಮರ್ಥ್ಯವನ್ನು ಹೊಂದಿದೆ. ಸೆಗಣಿಯು ಸಸ್ಯಗಳ ಬೆಳವಣಿಗೆಗೆ ಎಲ್ಲಾ ರೀತಿಯ ಪೋಷಕಾಂಶಗಳನ್ನು ಒದಗಿಸುತ್ತದೆ. ಸೆಗಣಿಯು ರೈತನ ಕೃಷಿ ಬದುಕಿನಲ್ಲಿ ಮಹತ್ತರ ಪಾತ್ರ ವಹಿಸುತ್ತದೆ. ಕಳೆದ 20 ವರ್ಷಗಳಿಂದ ಕೇವಲ ಸೆಗಣಿಯನ್ನಷ್ಟೇ ಬಳಕೆ ಮಾಡಿ ಅಧಿಕ ಇಳುವರಿಯನ್ನು ಪಡೆದಿದ್ದು, ನಾಡಿನ ಸಮಸ್ತ ರೈತ ಬಾಂಧವರು ಸೆಗಣಿಯನ್ನೇ ತಮ್ಮ ಸರ್ವಸ್ವವೆಂದು ಭಾವಿಸಿ ಅದನ್ನು ಯಥೇಚ್ಛವಾಗಿ ಬಳಕೆ ಮಾಡಬೇಕು ಎಂದರು.

ವಕೀಲ ಶಿವಾನಂದ ಭಾವಿಕಟ್ಟಿ, ಗುರು ಹಿರೇಮಠ, ಡಾ. ಧನವಂತ ಹಾಜವಗೋಳ, ಬಸವಣ್ಣೆಪ್ಪ ನವಲಗುಂದ, ಗುರುಮೂರ್ತಿ ಯರಗಂಬಳಿಮಠ, ಮಾಳಪ್ಪ ಅಮರಶೆಟ್ಟಿ, ಪ್ರಮೀಳಾ ಜಕ್ಕಣ್ಣವರ, ಪಿ.ಎಸ್. ಪತ್ರಾವಳಿ, ಗಂಗಾಧರ ಹುರಳಿ, ಕೆ.ಎನ್. ಜಾಕೋಜಿ, ದಯಾನಂದ ಮುಂದಿನಮನಿ, ಕೃಷ್ಣ ಬೊಂಗಾಳೆ, ಎನ್.ಆರ್. ಬಾಳೀಕಾಯಿ, ಮಹಾಂತಯ್ಯ ಹಿರೇಮಠ, ಸತೀಶ ಕೋಯಪ್ಪನವರ, ರಾಜೇಶ ನಾವಲಗಿಮಠ, ನಾಗರಾಜ ಕೊಲ್ಲೂರಿ, ವಿಜಯಾ ಹರವಿ, ಮಹಾದೇವ ಬೆಟಗೇರಿ ಸೇರಿದಂತೆ ಅಮ್ಮಿನಬಾವಿ ಗ್ರಾಮದ ರೈತ ಮುಖಂಡರು ಹಾಗೂ ರೈತ ಮಹಿಳೆಯರು ಇದ್ದರು.

ಕವಿವ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಸ್ವಾಗತಿಸಿದರು. ಡಾ. ಶೈಲಜಾ ಅಮರಶೆಟ್ಟಿ ನಿರೂಪಿಸಿದರು. ವೀರಣ್ಣ ಒಡ್ಡಿನ ವಂದಿಸಿದರು.

ಇದೇ ಸಂದರ್ಭದಲ್ಲಿ ಕೇಂದ್ರ ಲೋಕಸೇವಾ ಆಯೋಗ ನಡೆಸುವ ನ್ಯಾಶನಲ್ ಡಿಫೆನ್ಸ್ ಅಕಾಡೆಮಿ (ಎನ್.ಡಿ.ಎ) 2025ರ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡ ಅಪ್ಪಟ ಗ್ರಾಮೀಣ ಪ್ರತಿಭೆ ರಿಷಿ ಕೃಷ್ಣ ಬೊಂಗಾಳೆ ಅವರನ್ನು ಗೌರವಿಸಲಾಯಿತು. ದತ್ತಿ ದಾನಿ, ವಕೀಲ ಸದಾನಂದ ಮುಂದಿನಮನಿ ಹಾಗೂ ಕವಿವ ಸಂಘದ ಕಾರ್ಯಾಧ್ಯಕ್ಷ ಬಸವಪ್ರಭು ಹೊಸಕೇರಿ ಮಾತನಾಡಿದರು.

# ಗೋಡೆಗಳ ನಡುವಿನ ಕಲಿಕೆಯೊಂದೇ ಶಿಕ್ಷಣವಲ್ಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳಲ್ಲಿ ಸುಪ್ತವಾಗಿರುವ ಪ್ರತಿಭೆ ಅನಾವರಣ, ಪ್ರೋತ್ಸಾಹಕ್ಕೆ ಪ್ರತಿಭಾ ಕಾರಂಜಿ ಸೂಕ್ತ ವೇದಿಕೆಯಾಗಿದೆ ಎಂದು ಪ್ರೌಢ ವಿಭಾಗದ ಬಿ.ಆರ್.ಪಿ ಹಾಗೂ ಕ.ಸಾ.ಪ ತಾಲೂಕಾಧ್ಯಕ್ಷ ಅಧ್ಯಕ್ಷ ಈಶ್ವರ ಮೆಡ್ಲೇರಿ ಅಭಿಪ್ರಾಯಪಟ್ಟರು.

ಅವರು ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಯಲ್ಲಾಪುರದಲ್ಲಿ ಜರುಗಿದ ದೊಡ್ಡೂರು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಗಳನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಗುವಿನೊಳಗಿನ ಕಲೆ/ಕಲಾವಿದನನ್ನು ಹೊರ ತರುವುದು ಪ್ರತಿಭಾ ಕಾರಂಜಿಯ ಪ್ರಮುಖ ಉದ್ದೇಶ. ನಾಲ್ಕು ಗೋಡೆಯ ಒಳಗಿನ ಕಲಿಕೆಯೊಂದೇ ಶಿಕ್ಷಣವಲ್ಲ. ಬದಲಾಗಿ ಹೊರಗಿನ ಪರಿಸರದಲ್ಲಿ ಮಗುವಿನ ಅನುಭವಗಳನ್ನು ಕಲಿಕೆಯಾಗಿ ದೃಢಗೊಳಿಸಿ ಹೊರ ಜಗತ್ತಿಗೆ ಪರಿಚಯಿಸುವುದು ಇಂದಿನ ಆದ್ಯತೆ ಆಗಬೇಕು ಎಂದರು.

ಮುಖ್ಯೋಪಾಧ್ಯಾಯ ಎಫ್. ಎನ್. ಗೋಣೆಪ್ಪನವರ ಮಾತನಾಡಿ, ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪ್ರತಿಭಾ ಕಾರಂಜಿ ಕಾರ್ಯಕ್ರಮ ಪೂರಕವಾಗಿ ಕಾರ್ಯನಿರ್ವಹಿಸುತ್ತದೆ ಎಂದರು.

ಸಿ.ಆರ್.ಪಿ ಶಿವಾನಂದ ಅಸುಂಡಿ ಮಾತನಾಡಿ, ಯಲ್ಲಾಪುರ ಗ್ರಾಮವು ಶಿಕ್ಷಣ, ಸಂಸ್ಕೃತಿ ಹಾಗೂ ಧಾರ್ಮಿಕ ಕಾರ್ಯಕ್ರಮಗಳಿಗೆ ನಿರಂತರ ಪ್ರೋತ್ಸಾಹ ನೀಡುತ್ತಾ ಬರುತ್ತಿದೆ. ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯು ಮಾದರಿ ವಿದ್ಯಾರ್ಥಿಗಳನ್ನು ರೂಪಿಸುತ್ತಿದೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಶಿವಪುತ್ರಪ್ಪ ಲಮಾಣಿ ಅಧ್ಯಕ್ಷತೆ ವಹಿಸಿದ್ದರು. ಎಸ್.ಎಂ. ಮಲ್ಲಣ್ಣವರ, ದೇವೇಂದ್ರಪ್ಪ ಮತ್ತೂರ, ತಿರುಪತೆಪ್ಪ ಅಕ್ಕೂರ, ಆರ್.ಬಿ. ಜೋಶಿ, ಎಂ.ಎಸ್. ಹಿರೇಮಠ, ಡಿ.ಡಿ. ಲಮಾಣಿ, ಗಿರೀಶ ನೇಕಾರ, ಚಂದ್ರಶೇಖರ ವಡಕಣ್ಣವರ, ಎಸ್.ಎಚ್. ಉಮಚಗಿ, ಎಸ್. ಎಂ. ಸ್ಥಾವರಮಠ, ಎಂ.ಐ. ಕಣಕೆ, ಎಸ್.ಎಂ. ಹುಡೇದ ಸೇರಿ ವಿವಿಧ ಶಾಲೆಗಳ ಶಿಕ್ಷಕರು ಇದ್ದರು.

# ಎನ್‌ಎಸ್‌ಎಸ್ ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ಬೆಳೆಸುತ್ತದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ರಾಷ್ಟ್ರೀಯ ಸೇವಾ ಯೋಜನೆಯ ಮುಖ್ಯ ಉದ್ದೇಶ ದೇಶದ ಪ್ರತಿಯೊಬ್ಬ ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ಸಾರ್ವಜನಿಕ ಸೇವೆಯ ಮೂಲಕ ಅಭಿವೃದ್ಧಿಗೊಳಿಸುವುದಾಗಿದೆ ಎಂದು ಪ್ರಾಚಾರ್ಯರಾದ ಉಮಾ ಸಿ.ಕೊಳ್ಳಿ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಕಲಾಭವನದ ಆವರಣದಲ್ಲಿ ಮುಂಡರಗಿಯ ಶ್ರೀ ಜಗದ್ಗುರು ತೋಂಟದಾರ್ಯ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಕ.ವಿ.ವಿ ರಾಷ್ಟ್ರೀಯ ಸೇವಾ ಯೋಜನೆ ಘಟಕ, ಜಿ.ಪಂ, ತಾ.ಪಂ ಡಂಬಳ ಗ್ರಾಮ ಪಂಚಾಯಿತಿ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದು ಮಹಾತ್ಮ ಗಾಂಧೀಜಿಯವರ



ಕನಸಾಗಿತ್ತು. ಪ್ರಸ್ತುತ ದೇಶ–ವಿದೇಶಗಳ ನಡುವೆ, ಮನುಷ್ಯ–ಮನುಷ್ಯರ ನಡುವೆ ಅನೇಕ ಸಂಘರ್ಷಗಳು ನಡೆಯುತ್ತಿವೆ. ಇಂತಹ ಕಾಲದಲ್ಲಿ ಗಾಂಧಿಜೀಯವರ ತತ್ವಾದರ್ಶಗಳ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಮಾತನಾಡಿ, ಡಂಬಳ ಗ್ರಾಮ ಐತಿಹಾಸಿಕ ಗ್ರಾಮವಾಗಿದ್ದು, ಸ್ವಾತಂತ್ರ್ಯ ಹೋರಾಟದಲ್ಲಿ ತನ್ನದೇ ಆದ ಭೂಮಿಕೆಯನ್ನು ಹೊಂದಿದೆ. ಎನ್‌ಎಸ್‌ಎಸ್ ಶಿಬಿರವು ವಿದ್ಯಾರ್ಥಿಗಳಲ್ಲಿ ಸಂಘಟನಾ ಮನೋಭಾವ ಬೆಳೆಸುತ್ತದೆ ಎಂದು ಹೇಳಿದರು. ಪತ್ರಕರ್ತ ರಿಯಾಜಅಹ್ಮದ ದೊಡ್ಡಮನಿ ಮಾತನಾಡಿ, ಎನ್‌ಎಸ್‌ಎಸ್ ಶಿಬಿರವು ಅನುಭವ ಆಧಾರಿತ ಶಿಕ್ಷಣ ನೀಡುತ್ತದೆ. ಗ್ರಾಮೀಣ ಬದುಕು, ಸಂಸ್ಕೃತಿಯ ಪರಿಚಯ ಆಗಲಿದೆ. ಶಿಬಿರಾರ್ಥಿಗಳ ವ್ಯಕ್ತಿತ್ವ ಬೆಳವಣಿಗೆ ಹೊಂದಲಿದೆ. ಎನ್‌ಎಸ್‌ಎಸ್ ಶಿಬಿರಾರ್ಥಿಯು ಮುಂದಿನ ದಿನಗಳಲ್ಲಿ ಸಮಾಜಮುಖಿಯಾಗಿ ಕೆಲಸ ಮಾಡಲು ಪ್ರೇರಣೆ ನೀಡಲಿದೆ ಎಂದು ಹೇಳಿದರು.

ಕವಿ ಗುಡದಪ್ಪ ತಳಗೇರಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ಶಿಬಿರವು ವಿದ್ಯಾರ್ಥಿಗಳ ಕ್ರಿಯಾಶೀಲ ವ್ಯಕ್ತಿತ್ವ ಹೊರಹೊಮ್ಮಲು ಸೂಕ್ತ ವೇದಿಕೆಯಾಗಿದೆ. ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

# ಬಸ್ ಏರಿ ಪರಾರಿಯಾಗಿದ್ದ ಕಳ್ಳ 6 ಗಂಟೆಯೊಳಗೆ ಅಂದರ್!

▶▶ಮೊದಲನೇ ಪುಟದಿಂದ

ಎಫ್. ಸುಣಗಾರ, ಎಸ್.ಹೆಚ್. ನಾಗೇಂದ್ರಗಡ, ಕೆ.ವಿ. ತಿಗರಿ, ಎಚ್.ಐ. ಯಡಿಯಾಪೂರ, ಅಣ್ಣಪ್ಪ ಕವಲೂರ, ಸಂತೋಷ ಗುಬ್ಬಿ, ವೈ.ಬಿ. ಪಾಟೀಲ್, ಎಸ್.ಎಸ್. ಮಾವಿನಕಾಯಿ, ಎ.ಎಚ್. ಹಣಜಿ, ಪಿ.ಎಚ್. ಗುಬ್ಬಿ, ವಿಜಯಕುಮಾರ ವಾಲಿ, ನೆಹರು ನಾಯಕ, ಬಸವರಾಜ ಗುಡ್ಲಾನೂರ, ಪ್ರಕಾಶ ಗಾಣಿಗೇರ, ಎಮ್.ಬಿ. ವಡ್ಡಟ್ಟ, ಅನಿಲ ಬನ್ನಿಕೊಪ್ಪ, ವಿಠಲ್ ಬೆಳಗಲಿ, ಯಲ್ಲಾಲಿಂಗ ದಂಡಿನ, ಪರಶುರಾಮ ದೊಡ್ಡಮನಿ. ಪ್ರವೀಣ ಕಲ್ಲೂರ, ಅವಿನಾಶ ಬ್ಯಾಳಿ, ಮಂಜುನಾಥ ಅಸೂಟಿ, ಅಶೋಕ ಗದಗ, ಸಿ.ಇ.ಎನ್ ಪೊಲೀಸ್ ಠಾಣೆ–ಯ ಆನಂದಸಿಂಗ್ ದೊಡ್ಡಮನಿ, ಮುಂಡರಗಿ ಠಾಣೆಯ ಜೆ.ಐ.



ಬಚ್ಚೇರಿ, ಲಕ್ಷೇಶ್ವರ ಠಾಣೆಯ ದಾದಾಖಲಂದರ ಭಾಗವಹಿಸಿದ್ದರು.

ಪತ್ರಿಕಾಗೋಷ್ಠಿಯಲ್ಲಿ ಡಿ.ಎಸ್.ಪಿ ಮುರ್ತುಜಾ ಖಾದ್ರಿ, ಸಿ.ಪಿ.ಐ ಸಿದ್ದಾರಾಮೇಶ್ ಗಡೇದ್, ಲಾಲಸಾಬ್ ಜೂಲಕಟ್ಟಿ, ಧೀರಜ್ ಶಿಂದೆ, ಪಿ.ಎಸ್.ಐ ಆರ್.ಆರ್. ಮುಂಡವಾಡಗಿ, ಮಾರುತಿ ಜೋಗದಂಡಕರ, ಜಿ.ಟಿ. ಜಕ್ಕಲಿ ಸೇರಿದಂತೆ ಅಪರಾಧ ವಿಭಾಗದ ಅಧಿಕಾರಿಗಳು, ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪ್ರತಿಭಟನೆಗಿದ್ದ ಏಕೈಕ ಜಾಗ 'ಬೆಂಗಳೂರಿನ ಫ್ರೀಡಂ ಪಾರ್ಕ್' ತಾತ್ಕಾಲಿಕ ಬಂದ್, ಹೋರಾಟಗಾರರ ಪರದಾಟ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಎಲ್ಲೆಡೆಯಿಂದ ರಾಜಧಾನಿ ಬೆಂಗಳೂರಿಗೆ ಬಂದು ಹೋರಾಟಗಾರರು ಹೋರಾಟ ಮಾಡುವ ಏಕೈಕ ಜಾಗ ಫ್ರೀಡಂ ಪಾರ್ಕ್. ಅಂಥಾ ಫ್ರೀಡಂ ಪಾರ್ಕ್ ಅನ್ನು ಈಗ ಬಂದ್ ಮಾಡಲಾಗಿದೆ. ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವ ಹಿನ್ನೆಲೆ ತಾತ್ಕಾಲಿಕವಾಗಿ ಫ್ರೀಡಂ ಪಾರ್ಕ್ ಬಂದ್ ಮಾಡಲಾಗಿದೆ.

22 ಎಕರೆ ಜಾಗದಲ್ಲಿ ವ್ಯಾಪಿಸಿರುವ ಫ್ರೀಡಂ ಪಾರ್ಕ್ ಅನ್ನು ಒಳಗಿನಿಂದ ಬಂದ್ ಮಾಡಲಾಗಿದ್ದು, ಸಾರ್ವಜನಿಕರ ಪ್ರವೇಶಕ್ಕೆ ನಿಷೇಧ ಹೇರಲಾಗಿದೆ. ಹೀಗಾಗಿ ಇದೀಗ ಪ್ರತಿಭಟನಾಕಾರರು ಫ್ರೀಡಂ ಪಾರ್ಕ್ ಹೊರಭಾಗದಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಅಲ್ಲಿಯೂ ಪ್ರತಿಭಟನೆಗೂ ಅವಕಾಶ ಕೊಡದಂತೆ ಪೊಲೀಸರಿಗೆ ಮನವಿ ಮಾಡಲಾಗಿದೆ. ಬ್ರ್ಯಾಂಡ್ ಬೆಂಗಳೂರು ಹೆಸರಿನಡಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ಫ್ರೀಡಂ ಪಾರ್ಕ್‌ನಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಂಡಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಫ್ರೀಡಂ ಪಾರ್ಕ್‌ನಲ್ಲಿ ಅಭಿವೃದ್ಧಿ ಕಾಮಗಾರಿ ಪೂರ್ಣಗೊಂಡ ನಂತರ ಹೋರಾಟಗಾರರು, ನಡಿಗೆದಾರರು, ಪ್ರತಿಭಟನೆ, ಚಿತ್ರೀಕರಣ, ಸಾರ್ವಜನಿಕರಿಗೆ ಇತರೆ ಉದ್ದೇಶಗಳಿಗೆ ಅವಕಾಶ ಕಲ್ಪಿಸಲು ತೀರ್ಮಾನ ಮಾಡಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ 5 ಕೋಟಿ ರೂ ವೆಚ್ಚದಲ್ಲಿ ಶೌಚಾಲಯ, ಹೋರಾಟಗಾರರಿಗೆ ಮೂಲ ಸೌಕರ್ಯ ಕಲ್ಪಿಸುವ ಕಾಮಗಾರಿ ತೀವ್ರಗತಿಯಿಂದ ಸಾಗಿದೆ. ಇದೀಗ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದು, ನೀರಿನ ಸೌಲಭ್ಯವೂ ಸಹ ಇಲ್ಲವಾಗಿದೆ.

### ಇನ್ನರ್ ವ್ಹೀಲ್ ಕ್ಲಬ್ ಗದಗ–ಬೆಟಗೇರಿಯಿಂದ ಕರಾಟೆ ಕಾರ್ಯಾಗಾರ

# ಸುರಕ್ಷಿತ ಭವಿಷ್ಯಕ್ಕೆ ಸ್ವರಕ್ಷಣೆ ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ಗದಗ

ಉಜ್ವಲ ಭಾರತ, ಸದೃಢ ಸಮಾಜಕ್ಕಾಗಿ ಮಹಿಳಾ ಸಬಲೀಕರಣವು ಅತಿ ಅವಶ್ಯ. ಈ ನಿಟ್ಟಿನಲ್ಲಿ ಬಾಲ್ಯದಲ್ಲಿಯೇ ವಿದ್ಯಾರ್ಥಿನಿ೦ು್ುರ್ು ದೈಹಿಕವಾಗಿ, ಮಾನಸಿಕವಾಗಿ ಸಮರ್ಥರಾಗಿರುವುದು ಅತ್ಯವಶ್ಯಕ ಎಂದು ಇನ್ನರ್ ವ್ಹೀಲ್ ಕ್ಲಬ್ ಗದಗ–ಬೆಟಗೇರಿಯ ಅಧ್ಯಕ್ಷರಾದ ಅಶ್ವಿನಿ ಜಗತಾಪ್ ಅಭಿಪ್ರಾಯಪಟ್ಟರು.

ಬ್ರೈಟ್ ಹಾರಿಝಾನ್ ಶಾಲೆಯಲ್ಲಿ ನಡೆದ ಮೂರು ದಿನಗಳ ಕರಾಟೆ ಕಾರ್ಯಾಗಾರದಲ್ಲಿ ಅವರು ಮಾತನಾಡಿ, ವಿದ್ಯಾರ್ಥಿನಿಯರು ಎಲ್ಲ ಕ್ಷೇತ್ರದಲ್ಲಿಯೂ ಮುಂಚೂಣಿಯಲ್ಲಿ ಇರಬೇಕಾದರೆ ಅವರು ತಮ್ಮ ಸ್ವರಕ್ಷಣೆಗೆ ಹೆಚ್ಚಿನ ಮಹತ್ವವನ್ನು ನೀಡಬೇಕು ಎಂದು ಹೇಳಿದರು.

ಆಡಳಿತಾಧಿಕಾರಿಗಳಾದ ಬಿ.ಡಿ. ಹರ್ತಿ ಹಾಗೂ ಕೆ.ಬಿ. ಹರ್ತಿ, ಶಾಲೆಯ ವಿದ್ಯಾರ್ಥಿಗಳ ಭವ್ಯ ಭವಿಷ್ಯಕ್ಕಾಗಿ ಎಲ್ಲ ಕ್ಷೇತ್ರಗಳಲ್ಲಿಯೂ ಮಾರ್ಗದರ್ಶನ ನೀಡಿ ಅವರನ್ನು ಉತ್ತಮ ನಾಗರೀಕರನ್ನಾಗಿ ಮಾಡುವ ನಿಟ್ಟಿನಲ್ಲಿ ಇನ್ನರ್ ವ್ಹೀಲ್ ಕ್ಲಬ್ ಗದಗ–ಬೆಟಗೇರಿ 'ಉಜ್ವಲ ಭವಿಷ್ಯ' ಅಭಿಯಾನದಡಿಯಲ್ಲಿ ಮೂರು ದಿನಗಳ ಕರಾಟೆ ಕಾರ್ಯಾಗಾರಕ್ಕೆ ಸಹಕರಿಸಿ ಬೆಂಬಲಿಸಿದರು.

ಪ್ರೌಢ ಶಾಲೆ೦ು್ು ಮುಖ್ಯೋಪಾಧ್ಯಾಯರಾದ ಎಂ.ಎನ್. ದೇಸಾಯಿ ಹಾಗೂ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ಎನ್. ಗದಗ ಮಾತನಾಡಿ, ಕಾರ್ಯಾಗಾರದಲ್ಲಿ ಕಲಿತ ಸ್ವರಕ್ಷಣಾ ಕ್ರಮಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ತಮ್ಮನ್ನು ತಾವು ಸಂರಕ್ಷಿಸಿಕೊಳ್ಳಬೇಕು ಎಂದು ಹೇಳಿದರು.

ಕರಾಟೆ ಶಿಕ್ಷಕರಾದ ಸುಲೇಮಾನ್‌ಸರ್ ಅವರು ಕರಾಟೆಯ ಮಹತ್ವವನ್ನು ವಿವರಿಸಿದರು. ಕಾರ್ಯಾಗಾರದಲ್ಲಿ ಇನ್ನರ್ ವ್ಹೀಲ್ ಕ್ಲಬ್ಬಿನ ಕಾರ್ಯದರ್ಶಿ ಶಿವಲೀಲಾ ಅಕ್ಕಿ, ಖಖಔ ಪೂಜಾ ಭೂಮಾ, ಸಂಪಾದಕರಾದ ವೀಣಾ ಕಾವೇರಿ, ಕೋ–ಸಿಪಿಸಿಸಿ ಶಿಲ್ಪಾ ಅಕ್ಕಿ, ಪಾಸ್ಟ್ ಪ್ರೆಸಿಡೆಂಟ್‌ಗಳಾದ ಅನ್ನಪೂರ್ಣಾ ವರವಿ, ಸುಲೋಚನಾ ಐಹೊಳ್ಳಿ, ಸದಸ್ಯರಾದ ಮಂಜುಳಾ ಅಕ್ಕಿ, ಸುಮಾ ಶಿವನಗೌಡರ, ರೇಖಾ ರೊಟ್ಟಿ, ಸ್ಮಿತಾ ಹೊಸೂರ್ ಉಪಸ್ಥಿತರಿದ್ದರು.

# ಚಳಿಗಾಲದ ಅಧಿವೇಶನದಲ್ಲಿ ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಲ್ಲಿನ ನಗರಸಭೆ ಆವರಣದಲ್ಲಿ ಕೊ.ಜಿ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ ಅನಿರ್ದಿಷ್ಟ ಧರಣಿ 35ನೇ ದಿನಕ್ಕೆ ಕಾಲಿಟ್ಟಿದ್ದು, ರಾಜ್ಯ ರೈತ ಸಂಘದ ವಿ.ಆರ್. ನಾರಾಯಣರೆಡ್ಡಿ ಬಣದ ಪದಾಧಿಕಾರಿಗಳು ಬೆಂಬಲ ಸೂಚಿಸಿದರು.

ಸಂಘದ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ, ಸರಕಾರ ಕೊಪ್ಪಳ ಭಾಗ್ಯನಗರದ ಮೇಲೆ ಪರಿಸರ ಹಾನಿಯ ಕಾರ್ಮೋಡ ಕವಿದಿದ್ದರೂ ಗಂಭೀರವಾಗಿ ಪರಿಗಣಿಸುತ್ತಿಲ್ಲ. ಉತ್ತರ ಕರ್ನಾಟಕ ಸಮಸ್ಯೆಗಳ ಹೆಸರಿನಲ್ಲಿ ಬೆಳಗಾವಿಯಲ್ಲಿ ಅಧಿವೇಶನ ನಡೆಸುವ ಉದ್ದೇಶ ಒಳ್ಳೆಯದಿದ್ದರೂ ಗಂಭೀರ ಸಮಸ್ಯೆಗಳನ್ನು ಕೈಗೆತ್ತಿಕೊಂಡು ಚರ್ಚಿಸುವಂತೆ ಮಾಡಲು ಬಲವಾದ ಚಳವಳಿಯ ಒತ್ತಡ ಬೇಕಾಗುತ್ತದೆ. ನಾವು ಈ ಚಳಿಗಾಲದ ಅಧಿವೇಶನದಲ್ಲಿ ಪ್ರತಿಭಟನೆ ಮಾಡೋಣ ಎಂದು ಹೇಳಿದರು. ಶುಕ್ರವಾರ 36ನೇ ದಿನದ ಹೋರಾಟದಲ್ಲಿ ಬಾಧಿತ ಹಳ್ಳಿಗಳ ರೈತರು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯಾಧ್ಯಕ್ಷ ವಿ.ಆರ್. ನಾರಾಯಣರೆಡ್ಡಿ ಇವರ ನೇತೃತ್ವದಲ್ಲಿ ಕೇಂದ್ರೀಯ ಬಸ್ ನಿಲ್ದಾಣದ ಮುಂದಿನ ಸಂತಶ್ರೇಷ್ಠ ಕನಕದಾಸ ವೃತ್ತದಿಂದ ಆರಂಭವಾಗಿ ಅಶೋಕ ವೃತ್ತದವರೆಗೆ ಸರಕಾರದ ವಿರುದ್ಧ ಘೋಷಣೆ ಕೂಗುತ್ತಾ ಮೆರವಣಿಗೆ ಮೂಲಕ ಬಂದು ಅಲ್ಲಿ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿ ನಗರಕ್ಕೆ ಹೊಂದಿಕೊಂಡ ಬಲ್ಡೋಟಾ ವಿಸ್ತರಣೆ ಮಾಡಬಾರದೆಂದು ಆಗ್ರಹಿಸಲಿದ್ದಾರೆ ಎಂದು ಹೇಳಿದರು.

ಧರಣಿಯಲ್ಲಿ ನಿವೃತ್ತ ಉಪನ್ಯಾಸಕರು ಶಂಭುಲಿಂಗಪ್ಪ ಹರಗೇರಿ, ನಿವೃತ್ತ ಅಂಚೆ ಅಧಿಕಾರಿ ರವಿ ಕಾಂತನವರ, ಎಫ್.ಎಸ್. ಜಾಲಿಹಾಳ, ಮಹಾದೇವಪ್ಪ ಮಾವಿನಮಡು, ಮಲ್ಲಿಕಾರ್ಜುನ ಗೋನಾಳ, ಯಮನೂರಪ್ಪ ಹಾಲಳ್ಳಿ ಬಸಾಪುರ, ಮಖಬೂಲ ರಾಯಚೂರು, ಮಂಜುನಾಥ ಹಲಗೇರಿ, ಭೀಮಪ್ಪ ಯಲಬುರ್ಗಾ, ಬಸವರಾಜ ಶೀಲವಂತರ, ಕೇಶವ ಕಟ್ಟಿಮನಿ ಇದ್ದರು.

# ಲಿವಿಂಗ್ ಗೆಳತಿಯ ಮೋಜು ಮಸ್ತಿಗಾಗಿ ಕಳ್ಳನಾದ ಪ್ರಿಯಕರ ಈಗ ಜೈಲು ಪಾಲು!

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಲಿವಿಂಗ್ ಗೆಳತಿಯ ಮೋಜು ಮಸ್ತಿಗಾಗಿ ಕಳ್ಳನಾದ ಪ್ರಿಯಕರ ಸೇರಿ ಆತನಿಗೆ ಸಹಾಯ ಮಾಡಿದ್ದ ಮತ್ತೋರ್ವ ಈಗ ಜೈಲು ಪಾಲಾಗಿದ್ದಾರೆ.

ಕೂಲಿ ಕೆಲಸ ಮಾಡುತ್ತಿದ್ದ ಬಡಪಾಯಿ ಮಹಿಳೆಯನ್ನ ಕರೆದುಕೊಂಡು ಹೋಗಿ ಹಲ್ಲೆ ಮಾಡಿ ಚಿನ್ನಾಭರಣಗಳನ್ನ ಸುಲಿಗೆ ಮಾಡಿದ್ದ ಇಬ್ಬರು ಕುಖ್ಯಾತ ಸುಲಿಗೆಕೋರರನ್ನ ಕಲಬುರಗಿ ವಿಶ್ವವಿದ್ಯಾಲಯ ಠಾಣೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕಲ್ಲಪ್ಪ ಅಲಿಯಾಸ್ ಸಂಜು ಸೋಮಣ್ಣ (24) ಬಂಧಿತ ಪ್ರಮುಖ ಆರೋಪಿಯಾಗಿದ್ದು, ಇನ್ನು ಕಲ್ಲಪ್ಪನಿಗೆ ಸಹಾಯ ಮಾಡ್ತಿದ್ದ ಸಂತೋಷ್ ಎಂಬಾತನನ್ನು ಸಹ ಪೊಲೀಸರು ಬಂಧಿಸಿದ್ದಾರೆ.

ಕೂಲಿ ಕೆಲಸ ಮಾಡುತ್ತಿದ್ದ ಕಲ್ಲಪ್ಪ ಅಲಿಯಾಸ್ ಸಂಜು, ಮಹಿಳೆಯೊಬ್ಬಳ ಜೊತೆ ಲಿವಿಂಗ್ ಟುಗೆದರ್ ರಿಲೇಷನ್‌ಶಿಪ್‌ನಲ್ಲಿದ್ದ. ಹೀಗಾಗಿ ಆಕೆಯೊಂದಿಗೆ ಮೋಜು ಮಸ್ತಿ ಮಾಡಲು ಹಣ ಕಡಿಮೆ ಬಿದ್ದಾಗ ಪಿಕ್ ಪಾಕೇಟ್ ದಂಧೆ ಮಾಡುತ್ತಿದ್ದ ಎಂದು ತಿಳಿದುಬಂದಿದೆ. ಅದರಂತೆ ಕೂಲಿ ಮಾಡುವ ಮಹಿಳೆಯರನ್ನ ಟಾರ್ಗೆಟ್ ಮಾಡಿ ಸುಲಿಗೆ ಮಾಡುತ್ತಿದ್ದ ಎನ್ನುವುದು ತನಿಖೆಯಲ್ಲಿ ತಿಳಿದುಬಂದಿದೆ.

ಬಂಧಿತ ಸುಲಿಗೆಕೋರರಿಂದ 7.62 ಲಕ್ಷ ಮೌಲ್ಯದ 61 ಗ್ರಾಂ ಚಿನ್ನಾಭರಣ, 600 ಗ್ರಾಂ ಬೆಳ್ಳಿ ವಸ್ತುಗಳನ್ನ ಜಪ್ತಿ ಮಾಡಿಕೊಳ್ಳಲಾಗಿದೆ.

## ಚಳಿಗಾಲದ ಅಧಿವೇಶನ: ಸಂಸತ್ತಿನ ಹೊರಗೆ 'ವಾಯು ಮಾಲಿನ್ಯದ ಕುರಿತು ಚರ್ಚೆಗೆ ಒತ್ತಾಯಿಸಿ ವಿರೋಧ ಪಕ್ಷಗಳಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2025 ರ ಸಂಸತ್ತಿನ ಚಳಿಗಾಲದ ಅಧಿವೇಶನವು ನಾಲ್ಕನೇ ದಿನಕ್ಕೆ ಕಾಲಿಡುತ್ತಿದ್ದಂತೆ, ದೆಹಲಿ-ಎನ್‌ಸಿಆರ್ ಮತ್ತು ಉತ್ತರ ಭಾರತದಾದ್ಯಂತ ಹದಗೆಡುತ್ತಿರುವ ವಾಯು ಮಾಲಿನ್ಯದ ಕುರಿತು ತುರ್ತು ಚರ್ಚೆಗೆ ಒತ್ತಾಯಿಸಿ ಕಾಂಗ್ರೆಸ್ ಸಂಸದರು ಗುರುವಾರ ಲೋಕಸಭೆಯಲ್ಲಿ ಮುಂದೂಡಿಕೆ ಗೊತ್ತುವಳಿ ಸೂಚನೆಗಳನ್ನು ಮಂಡಿಸಿದರು. ತಮ್ಮ ನೋಟಿಸ್‌ನಲ್ಲಿ, ಕಾಂಗ್ರೆಸ್ ಸಂಸದ ಮಾಣಿಕಂ ಟ್ಯಾಗೋರ್ ಅವರು ಕೇಂದ್ರವು "ಪಾರ್ಶ್ವವಾಯುವಿಗೆ ಒಳಗಾಗಿದೆ" ಎಂದು ಆರೋಪಿಸಿದರು, ಅದು "ಕ್ರಮದ ಬದಲು ಸಲಹೆಗಳನ್ನು" ಮತ್ತು "ಸಂಘಟಿತ ರಾಷ್ಟ್ರೀಯ ಕಾರ್ಯತಂತ್ರದ ಬದಲು ಘೋಷಣೆಗಳನ್ನು" ನೀಡುತ್ತಿದೆ ಎಂದು ಹೇಳಿದರು, ಆದರೆ ಪಕ್ಷವು ವಾಯು ಮಾಲಿನ್ಯವನ್ನು ರಾಷ್ಟ್ರೀಯ ಆರೋಗ್ಯ ತುರ್ತುಸ್ಥಿತಿ ಎಂದು ಘೋಷಿಸಬೇಕೆಂದು ಒತ್ತಾಯಿಸಿತು.

ಈ ನಡುವೆ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಲೋಕಸಭೆಯಲ್ಲಿ ಪರಿಗಣನೆಗೆ ಮತ್ತು ಅಂಗೀಕಾರಕ್ಕಾಗಿ ಆರೋಗ್ಯ ಭದ್ರತಾ ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ, 2025 ಅನ್ನು ಮಂಡಿಸುವ ನಿರೀಕ್ಷೆಯಿದೆ.

ದಿನದ ವ್ಯವಹಾರಗಳ ಪಟ್ಟಿಯ ಪ್ರಕಾರ, ಲೋಕಸಭೆಯು ಮೊದಲು ಅಂದಾಜು ಸಮಿತಿಯ ಏಳನೇ ವರದಿಯನ್ನು (2025-26) ಕೈಗೆತ್ತಿಕೊಳ್ಳುತ್ತದೆ, ಇದನ್ನು ಸಂಸದರಾದ ಜುಗಲ್ ಕಿಶೋರ್ ಮತ್ತು ಸಂಜಯ್ ಜೈಸ್ವಾಲ್ ಅವರು ಮಂಡಿಸಲಿದ್ದಾರೆ. ವರದಿಯು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಅಡಿಯಲ್ಲಿ PM-KUSUM ಯೋಜನೆ ಮತ್ತು ಕಿಒ ಸೂರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆಯ ಅನುಷ್ಠಾನವನ್ನು ಪರಿಶೀಲಿಸುತ್ತದೆ.

### ತಾಲೂಕು ಮಟ್ಟದ ಜಲಾನಯನ ಮಹೋತ್ಸವ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಜಲಮೂಲವನ್ನು ಉಳಿಸಿ-ಬೆಳೆಸುವದು ಎಲ್ಲರ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಲಾನಯನ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿ.ಪಂ ಗದಗ ಮತ್ತು ಕೃಷಿ ಇಲಾಖೆ ಲಕ್ಷ್ಮೇಶ್ವರ ಇವುಗಳ ಆಶ್ರಯದಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ 2.0 ಜಲಾನಯನ ಮಹೋತ್ಸವ, ತಾಲೂಕು ಮಟ್ಟದ ಜಲಾನಯನ ಮಹೋತ್ಸವ ಅಭಿಯಾನ ಕಾರ್ಯಕ್ರಮವು ತಾಲೂಕಿನ ಹರದಗಟ್ಟಿ ಗ್ರಾಮದಲ್ಲಿ ಗುರುವಾರ ನೆರವೇರಿತು.

ಶಾಸಕ ಡಾ. ಚಂದ್ರು ಲಮಾಣಿ ಭೂಮಿಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಗ್ರಾಮದ ಪ್ರಾಥಮಿಕ ಶಾಲೆಯ ಹತ್ತಿರದ ಮೈದಾನದಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭೂಮಿಯ ಉತ್ಪಾದಕತೆಯನ್ನು ಹೆಚ್ಚಿಸಲು ಮಳೆಯಾಶ್ರಿತ ಒಣ ಭೂಮಿಯ ದೊಡ್ಡ ಪ್ರದೇಶಗಳನ್ನು ಜಲಾನಯನ ವ್ಯವಸ್ಥೆಯಡಿಯಲ್ಲಿ ತರಲು ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಲ್ಲಿ ಜಲಾನಯನ ಅಭಿವೃದ್ಧಿಯನ್ನು ಕೈಗೊಳ್ಳಲಾಗುತ್ತಿದೆ. ಗದಗ ಜಿಲ್ಲೆಯಲ್ಲಿಯೇ ಲಕ್ಷ್ಮೇಶ್ವರ ಕ್ಷೇತ್ರದಲ್ಲಿ ಪ್ರಥಮವಾಗಿ ಪ್ರಾರಂಭಿಸಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದರು.



ಗದಗ ಜಿಲ್ಲಾ ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಣ್ಣು, ನೀರಿನ ಸಂರಕ್ಷಣೆಯ ದೃಷ್ಟಿಯಿಂದ ಲಕ್ಷ್ಮೇಶ್ವರ ತಾಲೂಕು ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಮಹೋತ್ಸವಕ್ಕೆ ಆಯ್ಕೆಯಾಗಿದ್ದು, ಸುಮಾರು 9 ಗ್ರಾಮಗಳ 6 ಸಾವಿರ ಎಕರೆ ಪ್ರದೇಶದಲ್ಲಿ, ಮಳೆ ನೀರು ಕೊಯ್ಲು, ಹರಿಯುವ ನೀರು ತಡೆಗಟ್ಟುವದು, ನೀರು ಇಂಗಿಸುವದು ಸೇರಿದಂತೆ ಈ ಯೋಜನೆಯಡಿ ರೈತರ ಆರ್ಥಿಕ ಮತ್ತು ಸಾಮಾಜಿಕ ಬದಲಾವರಣೆಗೆ ತಳಹದಿಯಾಗಲಿದೆ. ಕೇಂದ್ರ ಮತ್ತು ರಾಜ್ಯ ಸರಕಾರದ ಸ್ವಾಮಿತ್ವದಲ್ಲಿ, ತೋಟಗಾರಿಕೆ ಹಾಗೂ ಅರಣ್ಯ ಇಲಾಖೆಗಳ ಬದುಗಳ ಮೇಲೆ ಸಸಿಗಳನ್ನು ನೆಡುವ ಮೂಲಕ ಮತ್ತಷ್ಟು ಭೂಸಾರ ಸಂರಕ್ಷಣೆಗೆ ಒತ್ತು ನೀಡಲಾಗುತ್ತಿದೆ. ಮೂರು ವರ್ಷಗಳ ಈ ಯೋಜನೆ ಅನುಷ್ಠಾನಗೊಂಡಾಗ ಈ ಭಾಗದ ರೈತರು ಆರ್ಥಿಕವಾಗಿ, ಸಾಮಾಜಿಕವಾಗಿ ಸಾಕಷ್ಟು ಬದಲಾವಣೆ ಕಾಣಲಿದ್ದಾರೆ ಎಂದು ಹೇಳಿದರು.

ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳ ಮುಖ್ಯ ಉದ್ದೇಶವೆಂದರೆ ಮಣ್ಣು ಮತ್ತು ತೇವಾಂಶವನ್ನು ಸಂರಕ್ಷಿಸುವುದು ಮತ್ತು ಜಲಾನಯನ ಪ್ರದೇಶದ ಒಟ್ಟಾರೆ ಉತ್ಪಾದಕತೆಯನ್ನು ಸಮಗ್ರ ರೀತಿಯಲ್ಲಿ ಸುಧಾರಿಸಲು ಅವುಗಳ ಸಾಮರ್ಥ್ಯಗಳಿಗೆ ಅನುಗುಣವಾಗಿ ಭೂಮಿಯನ್ನು ಉತ್ತಮಗೊಳಿಸುವುದಾಗಿದೆ. ನಿಟ್ಟಿನಲ್ಲಿ ಜಲ ಸಂರಕ್ಷಣೆ ಮಾಡುವದ ಮೂಲಕ ನಮ್ಮ ಜಲಮೂಲವನ್ನು ಉಳಿಸಿ ಬೆಳೆಸುವದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಕೆವಿಕೆ ಹುಲಕೋಟಿ ವಿಷಯ ತಜ್ಞ ನಾರಾಯಣ ಬಂಡಿ ಉಪನ್ಯಾಸ ನೀಡಿದರು. ಸಭೆಯ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಲಮಾಣಿ ವಹಿಸಿದ್ದರು. ಅತಿಥಿಗಳಾಗಿ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ವೀರೇಂದ್ರ ಪಾಟೀಲ, ಹುಲ್ಲೂರ ಗ್ರಾ.ಪಂ ಅಧ್ಯಕ್ಷೆ ಲೀಲಾ ತಳವಾರ, ವೀಣಾ ಅಕ್ಕಿ, ನಿಂಗಪ್ಪ ಬನ್ನಿ, ಜಾನು ಲಮಾಣಿ, ಗಂಗಾಧರ ಮೆಣಸಿನಕಾಯಿ, ಸೋಮಲೆಪ್ಪ ನಾಯಕ, ಜೀವಪ್ಪ ನಾಯಕ್, ಥಾವರೆಪ್ಪ ಲಮಾಣಿ, ಸೀತವ್ವ ಲಮಾಣಿ, ಕೃಷಿ ಅಧಿಕಾರಿಗಳಾದ ಚಂದ್ರಶೇಖರ ನರಸಮ್ಮನವರ, ಪಿ.ಕೆ. ಹೊನ್ನಪ್ಪನವರ ಮುಂತಾದವರು ಇದ್ದರು. ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ ಸ್ವಾಗತಿಸಿದರು, ಎನ್.ಎನ್.ಶಿಗ್ಲಿ, ಎಚ್.ಎಫ್. ನದಾಫ್ ನಿರೂಪಿಸಿದರು.

## ಸಿಎಂ ಬದಲಾವಣೆ ವಿಚಾರದಲ್ಲಿ ದುಡುಕಿದ್ರೆ ರಾಜ್ಯಕ್ಕೆ ಅಪಾಯ ಫಿಕ್ಸ್: ವಾಟಾಳ್ ನಾಗರಾಜ್

■ವಿಜಯಸಾಕ್ಷಿ ಸುದ್ದಿ, ಮೈಸೂರು

ಸಿಎಂ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ದುಡುಕಿ ನಿರ್ಧಾರ ಕೈಗೊಂಡ್ರೆ ರಾಜ್ಯಕ್ಕೆ ಅಪಾಯ ಫಿಕ್ಸ್ ಎಂದು ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ವಾಟಾಳ್ ನಾಗರಾಜ್, ಸಿಎಂ ಬದಲಾವಣೆ ವಿಚಾರದಲ್ಲಿ ಗೌರವಯುತವಾಗಿ ನಡೆದುಕೊಳ್ಳಬೇಕು. ಅಧಿಕಾರಿಗಳನ್ನ ವರ್ಗಾವಣೆ ಮಾಡಿದಂತಲ್ಲ. ಸಿದ್ದರಾಮಯ್ಯನಂತಹ ವ್ಯಕ್ತಿ ಮೂರು ಪಕ್ಷದಲ್ಲೂ ಇಲ್ಲ. ಬದಲಾವಣೆ ವಿಚಾರವನ್ನ ಸುಲಭವಾಗಿ ಪರಿಗಣಿಸಬೇಡಿ. ಸಿದ್ದರಾಮಯ್ಯರನ್ನ ಮುಖ್ಯಮಂತ್ರಿ ಸ್ಥಾನದಿಂದ ಕೆಳಗೆ ಇಳಿಸಿದ್ರೆ ರಾಜ್ಯಕ್ಕೆ ಘೋರ ಅನ್ಯಾಯ ಅಲ್ಲದೆ ಇದು ಅಪಾಯಕಾರಿ ಬೆಳವಣಿಗೆ.

ರಾಜ್ಯದಲ್ಲಿ ಧಂಗೆ ಏಳುತ್ತಾರೆ. ನನ್ನ ಅಭಿಪ್ರಾಯದಂತೆ ಸಿದ್ದರಾಮಯ್ಯ ಆರೋಗ್ಯವಾಗಿರುವವರೆಗೂ ಸಿಎಂ ಆಗಿ ಮುಂದುವರೆಸಿ ಇಲ್ಲದಿದ್ರೆ ರಾಜ್ಯಕ್ಕೆ ಅಪಾಯ ಗ್ಯಾರಂಟಿ ಎಂದು ಕಾಂಗ್ರೆಸ್ ಪಕ್ಷದ ಹೈಕಮಾಂಡ್‌ಗೆ ಎಚ್ಚರಿಕೆ ನೀಡಿದ್ದಾರೆ.

## ಬಾಳೆಹಣ್ಣು ಗಂಟಲಲ್ಲಿ ಸಿಕ್ಕಿ 5 ವರ್ಷದ ಬಾಲಕ ಸಾವು: ಪೋಷಕರೇ ಎಚ್ಚರ!

■ವಿಜಯಸಾಕ್ಷಿ ಸುದ್ದಿ, ಈರೋಡ್

ಬಾಳೆಹಣ್ಣು ತಿನ್ನುವಾಗ ಉಸಿರುಗಟ್ಟಿ 5 ವರ್ಷದ ಮಗು ಸಾವನ್ನಪ್ಪಿರುವ ಘಟನೆ ತಮಿಳುನಾಡಿನ ಈರೋಡ್‌ನಲ್ಲಿ ಜರುಗಿದೆ.

ಈರೋಡ್‌ನ ಅನ್ನೈ ಸತ್ಯ ನಗರದ ಎಂ. ಸಾಯಿಶರಣ್ ಎಂಬ ಬಾಲಕ ಮನೆಯಲ್ಲಿ ಬಾಳೆಹಣ್ಣು ತಿನ್ನುವಾಗ ಅದು ಗಂಟಲಲ್ಲಿ ಸಿಕ್ಕಿಹಾಕಿಕೊಂಡು, ಉಸಿರಾಡಲಾಗದೆ ಸಾವನ್ನಪ್ಪಿದ್ದಾನೆ.

ಪುಟ್ಟ ಬಾಲಕ ಸಾಯಿ ಶರಣ್ ಮನೆಯಲ್ಲಿ ಬಾಳೆಹಣ್ಣು ತಿನ್ನುತ್ತಿದ್ದಾಗ ಇದ್ದಕ್ಕಿದ್ದಂತೆ ಉಸಿರಾಟದ ತೊಂದರೆ ಕಾಣಿಸಿಕೊಂಡಿತು. ಆತನ ಪೋಷಕರಾದ ಮಾಣಿಕ್ ಮತ್ತು ಮಹಾಲಕ್ಷ್ಮಿ ನೆರೆಹೊರೆಯವರ ಸಹಾಯದಿಂದ ಆ ಮಗುವನ್ನು ಈರೋಡ್‌ನ ಖಾಸಗಿ ಆಸ್ಪತ್ರೆಗೆ ಕರೆದೊಯ್ದರು. ಆಸ್ಪತ್ರೆಯಲ್ಲಿ ಮಗುವನ್ನು ಪರೀಕ್ಷಿಸಿದ ವೈದ್ಯರು, ಆತನ ಶ್ವಾಸನಾಳದಲ್ಲಿ ಬಾಳೆಹಣ್ಣಿನ ತುಂಡು ಸಿಲುಕಿಕೊಂಡಿರುವುದನ್ನು ಪತ್ತೆ ಹಚ್ಚಿದರು. ನಂತರ ವೈದ್ಯರು ಆ ಮಗುವನ್ನು ಚಿಕಿತ್ಸೆಗಾಗಿ ಈರೋಡ್ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿದರು.

### ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಸ್ವಯಂ ಉದ್ಯೋಗ ಹೆಚ್ಚು ಪ್ರಯೋಜನಕಾರಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳುವ ನಿಟ್ಟಿನಲ್ಲಿ ಸ್ವಾವಲಂಬಿ ಜೀವನ ನಡೆಸಲು ಆದ್ಯತೆ ನೀಡಬೇಕು. ಎಲ್ಲರಿಗೂ ಉದ್ಯೋಗ ದೊರಕುವದು ಕಷ್ಟಸಾಧ್ಯ. ಮನೆಯ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ಉದ್ದೇಶದಿಂದ ಸ್ವಯಂ ಉದ್ಯೋಗ ಹೆಚ್ಚು ಪ್ರಯೋಜನಕಾರಿಯಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ತಾ.ಪಂ ಸಭಾಭವನದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಕೈಗಾರಿಕೆ ಇಲಾಖೆಯಿಂದ ಕೊಡಮಾಡುವ ಹೊಲಿಗೆ ಯಂತ್ರಗಳನ್ನು ಗುರುವಾರ ಫಲಾಭವಿಗಳಿಗೆ ವಿತರಣೆ ಮಾಡಿ ಅವರು ಮಾತನಾಡಿದರು.

ಇದೀಗ ಇಲಾಖೆಗಳ ಯೋಜನೆ ಮೂಲಕ ಮಹಿಳೆಯರಿಗೆ ವಿದ್ಯುತ್ ಹೊಲಿಗೆ ಯಂತ್ರವನ್ನು ನೀಡಲಾಗಿದ್ದು, ಹೊಲಿಗೆ ಉದ್ಯೋಗದಲ್ಲಿ ಹೆಚ್ಚು ಪರಿಣಿತಿ ಪಡೆದು ತನ್ಮೂಲಕ ಆರ್ಥಿಕತೆಯನ್ನು ಹೆಚ್ಚಿಸಿಕೊಳ್ಳುವದರ ಜೊತೆ-ಗೆ ಇಂತಹ ಯೋಜನೆಗಳ ಸದುಪಯೋಗಪಡಿಸಿಕೊಂಡು ಜೀವನ ಕಂಡುಕೊಳ್ಳಬೇಕು. ಫಲಾನುಭವಿಗಳು ಪಡೆದುಕೊಂಡ ಹೊಲಿಗೆ ಯಂತ್ರವನ್ನು ಮತ್ತೊಬ್ಬರಿಗೆ ಮಾರುವಂತಿಲ್ಲ. ಇದಕ್ಕಾಗಿ ಇಲಾಖೆ ವತಿಯಿಂದ ವಿಶೇಷ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಅಧಿಕಾರಿಗಳು ಫಲಾನುಭವಿಗಳ ಮನೆಗೆ ಬಂದು ಪರಿಶೀಲನೆ ಮಾಡಲಿದ್ದಾರೆ. ಮಹಿಳೆಯರು ಸ್ವಯಂ ಸೇವಾ ಸಂಸ್ಥೆಗಳನ್ನು ರಚಿಸಿಕೊಂಡು ಸರಕಾರದಿಂದ ಬರುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಡಿ. ದೇವರಾಜು ಅರಸು ನಿಗಮ, ಜವಳಿ ಮತ್ತು ಕೈಮಗ್ಗ ಇಲಾಖೆಯಿಂದ ಒಟ್ಟು 23 ಫಲಾನುಭವಿಗಳಿಗೆ, ಕೈಗಾರಿಕೆ ಇಲಾಖೆಯಿಂದ 39 ಫಲಾನುಭವಿಗಳಿಗೆ ವಿದ್ಯುತ್ ಚಾಲಿತ ಹೊಲಿಗೆ ಯಂತ್ರಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾ.ಪಂ ಇಓ ಧರ್ಮರ ಕೃಷ್ಣಪ್ಪ, ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಸಹಾಯಕ ಅಭಿವೃದ್ಧಿ ಅಧಿಕಾರಿ ಪ್ರದೀಪ ಕೊಣ್ಣೂರ, ಕೈಗಾರಿಕೆ ಇಲಾಖೆಯ ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಜಿ.ಪಂ, ಇಲಾಖೆಯ ಆರ್.ಡಿ. ಕದಡಿ, ನಿಂಗಪ್ಪ ಬನ್ನಿ, ಜಾನು ಲಮಾಣಿ, ಸಂಜೀವ ದೇಸಾಯಿ, ತುಕ್ಕಪ್ಪ ಪೂಜಾರ, ಕೃಷ್ಣಾ ಬಿದರಳ್ಳಿ, ಗಂಗಾಧರ ಮೆಣಸಿನಕಾಯಿ ಮುಂತಾದವರು ಇದ್ದರು.

## ಕೆರೆಗಳ ನಿರ್ವಹಣೆಯ ಕಾಳಜಿಯಿರಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೆರೆಗಳ ಪುನರುಜ್ಜೀವನ ಗೊಳಿಸುವ ಉದ್ದೇಶದಿಂದ ಕ್ಷೇತ್ರದಲ್ಲಿ ಹಲವಾರು ಕೆರೆಗಳ ಅಭಿವೃದ್ಧಿಗೆ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 18 ಲಕ್ಷ ರೂಗಳಲ್ಲಿ ಸೂರಣಗಿ ಗ್ರಾಮದಲ್ಲಿನ ಕೆರೆ ಅಭಿವೃದ್ಧಿಯನ್ನು ಕೈಗೊಳ್ಳಲಾಗುತ್ತಿದ್ದು, ಗುತ್ತಿಗೆದಾರರು ಸಮರ್ಪಕ ರೀತಿಯಲ್ಲಿ ಕಾಮಗಾರಿಯನ್ನು ನಿರ್ವಹಿಸುವ ಮೂಲಕ ಜನರಿಗೆ ಅನೂಕೂಲ ಕಲ್ಪಿಸಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ತಿಳಿಸಿದರು.

ಅವರು ತಾಲೂಕಿನ ಸೂರಣಗಿ ಗ್ರಾಮದಲ್ಲಿ ಗುರುವಾರ ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 18 ಲಕ್ಷ ರೂಗಳ ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಜನರಿಗೆ ಕೆರೆ, ಹಳ್ಳಗಳು ನೀರಿಗೆ ಆಧಾರವಾಗಿರುತ್ತವೆ. ಇತ್ತೀಚಿನ ದಿನಗಳಲ್ಲಿ ಕೆರೆಗಳಲ್ಲಿ ಹೂಳು ತುಂಬಿಕೊಂಡು ನೀರು ನಿಲ್ಲದಂತಾಗುತ್ತಿದೆ. ಅಲ್ಲದೆ ಕೆರೆಗಳ ಬಗ್ಗೆ ಸರಿಯಾದ ಕಾಳಜಿ ಇಲ್ಲದಂತಾಗುತ್ತಿರುವದರಿಂದ ನೀರಿನ ಮೂಲಗಳು ಕಡಿಮೆಯಾಗುತ್ತಿವೆ. ನೀರು ಅತ್ಯಮೂಲ್ಯವಾಗಿದ್ದು, ಅದನ್ನು ಸಂರಕ್ಷಿಸಬೇಕಾಗಿದ್ದು, ಅದಕ್ಕಾಗಿ ಗ್ರಾಮೀಣ ಭಾಗದಲ್ಲಿ ಇರುವ ಅನೇಕ ಕೆರೆಗಳ ಅಭಿವೃದ್ಧಿಗೆ ಕ್ರಮ ಕೈಗೊಂಡಿದ್ದೇವೆ. ಗ್ರಾಮಸ್ಥರು ಕೆರೆಯ ಸುತ್ತಮುತ್ತ ಗಲೀಜು ಮಾಡುವದು, ಕಸ ಹಾಕುವದು ಮಾಡಬಾರದು. ಇದನ್ನು ಸರಿಯಾಗಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಗ್ರಾಮಸ್ಥರು ಆದ್ಯತೆ ನೀಡಿ, ದನ-ಕರುಗಳಿಗೆ, ಪಶು-ಪಕ್ಷಿಗಳಿಗೆ ಹಾಗೂ ಜನರಿಗೆ ಕೆರೆಗಳ ನೀರು ಸರಿಯಾಗಿ ದೊರಕುವಂತೆ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಶಂಕ್ರಣ್ಣ ಶೀರನಹಳ್ಳಿ, ಸೋಮಣ್ಣ ದೊಡ್ಡಗಣ್ಣವರ, ವೀರೇಶ ಕಳ್ಳಿಹಾಳ, ಬಸವರಾಜ ಇಟಗಿ, ಪೀರಸಾಬ, ಕೃಷ್ಣ ಲಮಾಣಿ, ಲೋಕಪ್ಪ ಪೂಜಾರ, ಸಚಿನ್ ಮೇಲ್ಮುರಿ, ವೀರಭದ್ರಯ್ಯ ಮಠಪತಿ, ಪಿಡಿಓ ಗೌರಮ್ಮ ರೋಣದ, ನಿಂಗಪ್ಪ ಬನ್ನಿ, ನಾಗರಾಜ ಹಾವಳಕೇರಿ, ಸಂತೋಷ, ಗಂಗಾಧರ ಮೆಣಸಿನಕಾಯಿ, ಜಾನು ಲಮಾಣಿ, ನಾಗರಾಜ, ಕಾರ್ಯದರ್ಶಿ ಎಸ್.ಎಫ್. ಹಳ್ಯಾಳ, ಎಂಐಡಿಯ ಪ್ರವೀಣ ಪಾಟೀಲ ಮುಂತಾದವರಿದ್ದರು.

## ಮಣ್ಣನ್ನು ಉಳಿಸಿಕೊಳ್ಳುವುದು ನಮ್ಮ ಕರ್ತವ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಮಣ್ಣು ಬಹಳ ಮುಖ್ಯವಾದ ಸಂಪತ್ತು. ನಮ್ಮ ಹೊಲದಲ್ಲಿರುವ ಮಣ್ಣು ಎಷ್ಟೋ ವರ್ಷಗಳ ನೈಸರ್ಗಿಕ ಪ್ರಕ್ರಿಯೆಯಿಂದ ರೂಪುಗೊಂಡಿದೆ. ಅಂತಹ ಮಣ್ಣನ್ನು ಉಳಿಸಿಕೊಳ್ಳುವುದು ನಮ್ಮ ಕರ್ತವ್ಯ ಎಂದು ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ನಾರಾಯಣ ಬಂಡಿ ಅಭಿಪ್ರಾಯಪಟ್ಟರು.

ಅವರು ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿಯಲ್ಲಿ ರೋಣದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಕೃಷಿ ಮಿತ್ರರಿಗಾಗಿ ನಡೆದ ತಾಂತ್ರಿಕ ತರಬೇತಿಯಲ್ಲಿ ಉಪನ್ಯಾಸ ನೀಡಿದರು.

ಎಲ್.ಆರ್.ಐ ಕಾರ್ಡ್‌ನಲ್ಲಿ ಮಣ್ಣಿನ ಗುಣಧರ್ಮ, ಬೆಳೆ ಸೂಕ್ತತೆ ಹಾಗೂ ಅವಶ್ಯಕ ಪೋಷಕಾಂಶದ ಬಗ್ಗೆ ವಿವರವಾದ ಮಾಹಿತಿ ಇರುತ್ತದೆ. ಅದನ್ನು ರೈತರಿಗೆ ತಲುಪಿಸುವ ಕೆಲಸವನ್ನು ಕೃಷಿ ಮಿತ್ರರು ಮಾಡಬೇಕು ಎಂದರು.

ಉಪ ಕೃಷಿ ನಿರ್ದೇಶಕರಾದ ಬಿ.ಆರ್. ಫಾಲಾಕ್ಷಗೌಡ ಮಾತನಾಡಿ, ಎಲ್.ಆರ್.ಐ ಕಾರ್ಡ್ ಬಹಳ ಮುಖ್ಯವಾದ ಮಾಹಿತಿಯನ್ನು ಹೊಂದಿರುತ್ತದೆ. ಅದರ ಮಾಹಿತಿಯನ್ನು ರೈತರಿಗೆ ಸರಿಯಾಗಿ ತಿಳಿಸಬೇಕು. ಅಲ್ಲದೆ, ಕೃಷಿ ಮಿತ್ರರು ಉತ್ತಮವಾದ ಬೆಂಬಲ ನೀಡಿ ಯೋಜನೆಯನ್ನು ಯಶಸ್ವಿ ಮಾಡಬೇಕು ಎಂದರು.

ಸಹಾಯಕ ಕೃಷಿ ನಿರ್ದೇಶಕರಾದ ಎಸ್.ಎಫ್. ತಹಸೀಲ್ದಾರ ಮಾತಾನಾಡಿ, ರಿವಾರ್ಡ್ ಯೋಜನೆ ವೈಜ್ಞಾನಿಕ ತಳಹದಿಯ ಮೇಲೆ ರೂಪುಗೊಂಡಿದೆ. ಅದರ ಮುಖ್ಯವಾದ ಭಾಗವಾದ ಎಲ್.ಆರ್.ಐ ಕಾರ್ಡ್ ವಿತರಣೆ-ಯಾಗಿದ್ದು, ಅದು ಯಶಸ್ವಿಗೊಳಿಸಲು ಸಿಬ್ಬಂದಿಗಳು ಶ್ರಮಿಸಬೇಕು ಎಂದರು. ಯೋಜನೆಯ ಸಿಬ್ಬಂದಿ ಮಂಜುನಾಥ ಬ್ಯಾಳಿ ಮಾತನಾಡಿದರು. ತಾಂತ್ರಿಕ ಅಧಿಕಾರಿ ಗೋಣಿಬಸಪ್ಪ ಇದ್ದರು. ದೀಪಾ ಕರೀಗೌಡ್ರು ಪ್ರಾರ್ಥಿಸಿದರು. ಶಬೀನಾ ಪಲ್ಲೇದ ಸ್ವಾಗತಿಸಿದರು, ದ್ರಾಕ್ಷಾಯಿಣಿ ಕುರ್ತಕೋಟಿ ನಿರೂಪಿಸಿದರು. ಪಲ್ಲವಿ ಪೂಜಾರ ವಂದಿಸಿದರು.

### ಎನ್‌ಎಸ್‌ಎಸ್‌ನ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಎಂ.ಎಂ. ನರಗುಂದ ಅಭಿಮತ

# ಎನ್‌ಎಸ್‌ಎಸ್‌ನಿಂದ ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಭಾವೈಕ್ಯತೆ

■ವಿಜಯಸಾಕ್ಷಿ ಸುದ್ದಿ, ಗದಗ

ಗಾಂಧೀಜಿಯ ಆಶಯದಂತೆ ಅನುಭವ, ಪರಿಶ್ರಮ ಮತ್ತು ಸಮಾಜಸೇವೆ ವಿದ್ಯಾರ್ಥಿಗಳಲ್ಲಿ ರೂಢಿಯಾಗುವಂತಿರಬೇಕು. ಶಿಕ್ಷಣದ ಅಂತಿಮ ಗುರಿ ಸಮಾಜದೊಳಗೆ ಜವಾಬ್ದಾರಿಯುತ ನಾಗರಿಕರನ್ನು ರೂಪಿಸುವುದಾಗಿದೆ ಎಂದು ಕೆ.ಎಲ್.ಇ ಸಂಸ್ಥೆಯ ಜೆ.ಟಿ. ಪದವಿಪೂರ್ವ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಎಂ.ಎಂ. ನರಗುಂದ ಹೇಳಿದರು.

ಸಮೀಪದ ಅಸುಂಡಿ ಗ್ರಾಮದಲ್ಲಿ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯ, ಗದಗ ಎನ್‌ಎಸ್‌ಎಸ್ ಘಟಕ ಆಯೋಜಿಸಿದ್ದ ಎನ್‌ಎಸ್‌ಎಸ್‌ನ 7 ದಿನಗಳ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸೇವೆಯ ಮೂಲಕ ಸಮಾಜ ಅರಿವು ಮೂಡಿಸುವುದು ಎನ್‌ಎಸ್‌ಎಸ್‌ನ ಮುಖ್ಯ ಉದ್ದೇಶವಾಗಿದ್ದು, ಅದರಿಂದ ಸ್ವಯಂಸೇವಕರ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಸೇವೆ ಎಂದರೆ ನಮ್ಮ ಶ್ರಮ, ವಿದ್ಯೆ, ಬುದ್ಧಿ, ಜ್ಞಾನ, ಕೌಶಲ್ಯ ಮತ್ತು ಸಾಧ್ಯವಾದ ಆರ್ಥಿಕ ಸಾಮರ್ಥ್ಯಗಳನ್ನು ಫಲಾಪೇಕ್ಷೆಯಿಲ್ಲದೆ ಸಮಾಜಕ್ಕೆ ಸಮರ್ಪಿಸುವ ಮನೋಭಾವ. ವಿದ್ಯಾರ್ಥಿಗಳು ವ್ಯಾಸಂಗದ ನಂತರವೂ ಅನುಕಂಪ ಹಾಗೂ ಸೇವಾಭಾವನೆ ಉಳಿಸಿಕೊಂಡಿರಬೇಕು ಎಂದರು. ಅಸುಂಡಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ್ ಕಾಗದಗಾರ ಮಾತನಾಡಿ, ಗ್ರಾಮೀಣ ಜನರು ಬಡವರು ಮತ್ತು ಅನಕ್ಷರಸ್ಥರಾಗಿರುವುದರಿಂದ ಕಾನೂನು ಅರಿವು ಕಾರ್ಯಕ್ರಮಗಳನ್ನು ಎನ್‌ಎಸ್‌ಎಸ್ ಸ್ವಯಂಸೇವಕರು ಹೆಚ್ಚಿನ ಮಟ್ಟದಲ್ಲಿ ನಡೆಸಬೇಕು. ಕಾನೂನು ವಿದ್ಯಾರ್ಥಿಗಳು ಗ್ರಾಮಸ್ಥರಿಗೆ ಸರ್ಕಾರಿ ಯೋಜನೆಗಳ ಪ್ರಯೋಜನ ತಲುಪಲು ನೆರವಾಗುವ ಜವಾಬ್ದಾರಿ ಹೊಂದಿದ್ದಾರೆ ಎಂದರು.



### ಶಿಬಿರ ಕಾರ್ಯಗಳಿಗೆ ಮೆಚ್ಚುಗೆ

ಕುವೆಂಪು ಶತಮಾನೋತ್ಸವ ಸರಕಾರಿ ಮಾದರಿ ಶಾಲೆಯ ಮುಖ್ಯೋಪಾಧ್ಯಾಯ ವಿ.ಎಫ್. ಕಲಕಂದಿ ಅವರು, ಗಿಡ ನೆಡುವಿಕೆ ಮತ್ತು ಕಾನೂನು ಜಾಗೃತಿಯಂತಹ ಚಟುವಟಿಕೆಗಳನ್ನು ಎನ್‌ಎಸ್‌ಎಸ್ ಘಟಕವು ಪರಿಣಾಮಕಾರಿಯಾಗಿ ನಡೆಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಸುಂಡಿ-ಮಲ್ಲಸಮುದ್ರ ಗ್ರಾಮ ಪಂಚಾಯಿತಿ ಸದಸ್ಯ ಸೋಮರಡ್ಡಿ ರಾಮೇನಹಳ್ಳಿ ಮಾತನಾಡಿ, ನಗರದ ವಿದ್ಯಾರ್ಥಿಗಳು ಗ್ರಾಮೀಣ ಜೀವನವನ್ನು ಅನುಭವಿಸುವ ಮೂಲಕ ಜೀವನ ಮೌಲ್ಯಗಳು, ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳನ್ನು ಅರಿತುಕೊಳ್ಳುವಂತೆ ಮಾಡುವುದು ಶಿಬಿರದ ಗುರಿಯಾಗಿದೆ ಎಂದರು.

ಡಾ. ಎಸ್.ಸಿ. ಪಾಲಕೊಂಡ ಸಭೆಯ ಅಧ್ಯಕ್ಷತೆ ವಹಿಸಿ, ವಿದ್ಯಾರ್ಥಿಗಳು ಕಲಿಕೆಯ ಜೊತೆಯಲ್ಲಿ ಕ್ರಿಯಾಶೀಲತೆ ಹಾಗೂ ಉತ್ತಮ ಚಿಂತನೆಯಿಂದ ಗುರಿ ಸಾಧನೆ ಮಾಡಬೇಕು ಎಂದು ತಿಳಿಸಿದರು.

ಯುವ ರಾಜ್ಯೋತ್ಸವ ಪ್ರಶಸ್ತಿಗೆ ಅಯ್ಕೆಯಾದ ಅಸುಂಡಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ್ ಕಾಗದಗಾರ, ಸಮಾಜಕ್ಕೆ ನಿಸ್ವಾರ್ಥ ಸೇವೆ ನೀಡದ ಅಸುಂಡಿ-ಮಲ್ಲಸಮುದ್ರ ಗ್ರಾ.ಪಂ ಸದಸ್ಯ ಸೋಮರಡ್ಡಿ ರಾಮೇನಹಳ್ಳಿ ಇವರುಗಳನ್ನು ಎನ್‌ಎಸ್‌ಎಸ್ ಘಟಕದ ವತಿಯಿಂದ ಸನ್ಮಾನಿಸಲಾಯಿತು. ಉಪನ್ಯಾಸಕಿ ಡಾ. ಜ್ಯೋತಿ ಸಿ.ವಿ, ನಿವೃತ್ತ ಡಿಡಿಪಿಐ ಎಂ.ಎ. ರಡ್ಡೇರ ಸೇರಿದಂತೆ ಎನ್.ಎಸ್.ಎಸ್ ಅಧಿಕಾರಿ ಡಾ. ಸಿ.ಬಿ. ರಣಗಟ್ಟಿಮಠ ವರದಿ ವಾಚಿಸಿದರು. ಸ್ವಯಂ ಸೇವಕರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಸುಧಾ ಹರಿಜನ್ ಪ್ರಾರ್ಥಿಸಿದರು. ರಂಜಿತಾ ಜಿ ಸ್ವಾಗತಿಸಿದರು. ಬಸವರಾಜ ಗಂಗಣ್ಣವರ ಅತಿಥಿಗಳನ್ನು ಸನ್ಮಾನಿಸಿದರು. ಭಾವನಾ ನಿರೂಪಿಸಿದರು. ಸಂಕೇತ್ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka